# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 61 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 18–09–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 61 | RNI No: KARKAN/2023/88462 | Chitradurga | Date: 18-09-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಕರ್ನಾಟಕ ಜಾನಪದ ಪರಿಷತ್ತ್ ಅಧ್ಯಕ್ಷರಾಗಿ ತುಂಬಿನಕೆರೆ ಬಸವರಾಜ್ 2
ಸ್ವಚ್ಛ ಸ್ವಭಾವ, ಸ್ವಚ್ಛ ಸಂಸ್ಕಾರ ಬೆಳೆಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಿ: ಡಾ.ಬಿ.ವಿ.ಗಿರೀಶ್ 3
20 ರಂದು ಬಿಟ್ಸ್ ಹೈಟೆಕ್ ಕಾಲೇಜಿನ ಪದವಿ ಪ್ರದಾನ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 20 ರಂದು ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರ

» ಚಿತ್ರದುರ್ಗ

ಜಿಲ್ಲಾ ಆಸ್ಪತ್ರೆ ಹಾಗೂ ದಾವಣಗೆರೆ ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ ಸಹಯೋಗದಲ್ಲಿ ಸೆ.20 ರಂದು ಜಿಲ್ಲಾ ಆಸ್ಪತ್ರೆ ಬಿ.ಸಿ.ರಾಯ್ ಸಭಾಂಗಣದಲ್ಲಿ ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರ ಏರ್ಪಡಿಸಲಾಗಿದೆ. ಬೆಳಿಗ್ಗೆ 10 ಗಂಟೆಯಿಂದ 3 ಗಂಟೆಯವರೆಗೂ ತಪಾಸಣೆ ನಡೆಸಲಾಗುವುದು. ರೋಗಿಗಳು ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡಿಸುಕೊಳ್ಳುವಂತೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ. ರವೀಂದ್ರ ತಿಳಿಸಿದ್ದಾರೆ. ನೊಂದಣಿಗಾಗಿ ಮೊಬೈಲ್ ಸಂಖ್ಯೆ 9844458881 ಹಾಗೂ 974255516 ಸಂಪರ್ಕಿಸಬಹುದು.

### ಕಟ್ಟಡಗಳ ಮೇಲೆ ಏರದಿರಲು ಸೂಚನೆ

» ಚಿತ್ರದುರ್ಗ

ಸೆ.28 ರಂದು ಹಿಂದೂ ಮಹಾಗಣಪತಿ ವಿಸರ್ಜನೆ ಪ್ರಯುಕ್ತ ಚಿತ್ರದುರ್ಗ ನಗರದಲ್ಲಿ ಬೃಹತ್ ಶೋಭಾ ಯಾತ್ರೆ ಜರುಗಲಿದೆ. ಶೋಭಾ ಯಾತ್ರೆ ಮೆರವಣಿಗೆಯು ಚಳ್ಳಕೆರೆ ಗೇಟ್‌ನಿಂದ ಬಿ.ಡಿ.ರಸ್ತೆ ಮುಖಾಂತರ, ಗಾಂಧಿ ವೃತ್ತ, ಹೊಳಲ್ಕೆರೆ ರಸ್ತೆಯ ಮೂಲಕ ಚಂದ್ರವಳ್ಳಿ ತೋಟಕ್ಕೆ ತಲುಪಲಿದೆ. ಈ ವೇಳೆ ಸಾರ್ವಜನಿಕರು ಯಾವುದೇ ಅಂಗಡಿ ಮುಂಗಟ್ಟು, ಮಳಿಗೆ ಹಾಗೂ ಕಟ್ಟಡದ ಮೇಲೆ ಏರದಿರುವಂತೆ ಬೆಸ್ಕಾಂ ಸೂಚನೆ ನೀಡಿದೆ. ವಿದ್ಯುತ್ ತಂತಿಗಳು ಕಟ್ಟಡದ ಸಮೀಪವೇ ಹಾದು ಹೋಗಿರುತ್ತವೆ. ಇದರಿಂದ ವಿದ್ಯುತ್ ಅವಘಡಗಳು ಸಂಭವಿಸಬಹುದು. ಆದ್ದರಿಂದ ಅಂಗಡಿ ಹಾಗೂ ಕಟ್ಟಡ ಮಾಲಿಕರು ಈ ಬಗ್ಗೆ ನಿಗಾ ವಹಿಸುವಂತೆ ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿಯರ್ ಕೋರಿದ್ದಾರೆ.

### ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ಜಿಲ್ಲಾ ಮಾದಿಗ ನೌಕರರ ಸಾಂಸ್ಕೃತಿಕ ಸಂಘದ (ರಿ) ವತಿಯಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಚಿತ್ರದುರ್ಗ ಜಿಲ್ಲಾ ಮಾದಿಗ ನೌಕರರ ಸಾಂಸ್ಕೃತಿಕ ಸಂಘದಿಂದ 2023–24ನೇ ಸಾಲಿನ ಪ್ರತಿಭಾ ಪುರಸ್ಕಾರ ಸಮಾರಂಭವು ಸೆ.22 ರಂದು ಚಿತ್ರದುರ್ಗ ನಗರದ ತ.ರಾ.ಸು ರಂಗಮಂದಿರದಲ್ಲಿ ನಡೆಯಲಿದೆ. ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಪ್ರತಿ ಶತ 80%ಕ್ಕೂ ಹೆಚ್ಚಿನ ಅಂಕ ಪಡೆದ ಮಕ್ಕಳಿಂದ ಚಿತ್ರದುರ್ಗ ತಾಲ್ಲೂಕಿನ ಮಾದಿಗ ಸಮುದಾಯದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಸೆ. 20 ವಿದ್ಯಾರ್ಥಿಗಳು ನಿಗದಿತ ದಿನಾಂಕದೊಳಗೆ ತಮ್ಮ ಸ್ವ–ವಿವರದೊಂದಿಗೆ ಅಂಕಪಟ್ಟಿ ಮತ್ತು ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿ, 2 ಪಾಸ್‌ಪೋರ್ಟ್ ಸೈಜ್ ಪೋಟೋದೊಂದಿಗೆ ಅರ್ಜಿಯನ್ನು ಸಲ್ಲಿಸಲು ಜಿಲ್ಲಾಧ್ಯಕ್ಷರಾದ ಡಿ.ಟಿ.ಶ್ರೀನಿವಾಸನ್, ಪ್ರಧಾನ ಕಾರ್ಯದರ್ಶಿಎಂ. ತಿಪ್ಪೇಸ್ವಾಮಿ ಪತ್ರಿಕಾ ಕೋರಿದ್ದಾರೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ತಿಪ್ಪೇಸ್ವಾಮಿ,: 9535561879 ತಾ, ಕಾರ್ಯದರ್ಶಿ ಟಿ.ಶ್ರೀನಿವಾಸಮೂರ್ತಿ 9900915346 ಅಧ್ಯಕ್ಷರು ಬಿ.ಹೆಚ್.ಶಿವಪ್ರಕಾಶ್ 9535384938 ಸಹ ಕಾರ್ಯದರ್ಶಿ ಸಿದ್ದೇಶ್ವರ್ ಕೆ.9972446430 ದೇವರಾಜ್ ಹೆಚ್. 9663159396 ಇವರನ್ನು ಮೊಬೈಲ್ ಸಂಖ್ಯೆಯ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಮಹಿಳಾ ನಾಯಕತ್ವ ಶಿಬಿರ

» ದಾವಣಗೆರೆ

ಸ್ಲಂ ಜನಾಂದೋಲನ ಕರ್ನಾಟಕ ಹಾಗೂ ಸಾವಿತ್ರಿ ಬಾಯಿ ಪುಲೆ ಮಹಿಳಾ ಸಂಘಟನೆ ಜಿಲ್ಲಾ ಸಮಿತಿ ದಾವಣಗೆರೆ ವತಿಯಿಂದ ನಗರದ ರೋಟರಿ ಬಾಲಭವನದಲ್ಲಿ ಸೆ.18ರ ಬೆಳಿಗ್ಗೆ 11ಕ್ಕೆ ಯುವ ಮತ್ತು ಮಹಿಳಾ ನಾಯಕತ್ವ ಶಿಬಿರ ಹಾಗೂ ಅಸಂಘಟಿತ ವಲಯ ಕಾರ್ಮಿಕರಿಗೆ ಮಾಹಿತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.. ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಸ್ಲಂ ಜನಾಂದೋಲನದ ಗೌರವಾಧ್ಯಕ್ಷ ಎಸ್. ಎಲ್.ಆನಂದಪ್ಪ ಅಧ್ಯಕ್ಷತೆ ವಹಿಸುವರು. ರಾಜ್ಯ ಸಂಚಾಲಕ ಎ.ನರಸಿಂಹಮೂರ್ತಿ ಪ್ರಸ್ತಾವಿಕವಾಗಿ ಮಾತನಾಡುವರು.

# ಪ್ರಧಾನಿ ನರೇಂದ್ರ ಮೋದಿ ಜನ್ಮದಿನ ಹಿನ್ನೆಲೆ
# ಅ.2ರವರೆಗೆ ವಿವಿಧ ರೀತಿ ಕಾರ್ಯಕ್ರಮ

» ಚಿತ್ರದುರ್ಗ

ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ 74ನೇ ಹುಟ್ಟು ಹಬ್ಬದ ಹಿನ್ನಲೆಯಲ್ಲಿ ಚಿತ್ರದುರ್ಗ ಬಿಜೆಪಿ ವತಿಯಿಂದ ಇಂದು ಬೆಳಿಗ್ಗೆ ನಗರದ ಜೆ.ಸಿ.ಆರ್. ಗಣಪತಿ ದೇವಸ್ಥಾನದ ಆವರಣದಲ್ಲಿರುವ ಪಾರ್ಕನಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಇದರಲ್ಲಿ ಭಾಗವಹಿಸಿದ್ದ ಸಂಸದರಾದ ಗೋವಿಂದ ಕಾರಜೋಳರವರು ಅಲ್ಲಿ ಪೊರಕೆಯನ್ನು ಹಿಡಿದು ಸ್ವಚ್ಛವನ್ನು ಮಾಡುವುದರ ಮೂಲಕ ಸ್ವಚ್ಛತಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು. ದೇಶದ ಪ್ರಧಾನ ಮಂತ್ರಿಗಳಾದ ನರೇಂದದ್ರ ಮೋದಿಯವರ ಹುಟ್ಟು ಹಬ್ಬದ ಅಂಗವಾಗಿ ಇಂದಿನಿಂದ ಅ.2ರವರೆಗೆ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಇದರಲ್ಲಿ ರಕ್ತದಾನ ಶಿಬಿರ, ಉಚಿತ ಆರೋಗ್ಯ ತಪಾಸಣೆ ಸೇರಿದಂತೆ ವಿವಿಧ ಸೇವಾ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ.

ಚಿತ್ರದುರ್ಗದಲ್ಲಿ ಸೆ. 20 ರ ಶುಕ್ರವಾರ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ ಇದರಲ್ಲಿ ಯುವ ಜನತೆ ಸಕ್ರಿಯವಾಗಿ ಭಾಗವಹಿಸುವುದರ ಮೂಲಕ ರಕ್ತವನ್ನು ದಾನ ಮಾಡಿ ಜೀವವನ್ನು ಉಳಿಸುವ ಕಾರ್ಯವನ್ನು ಮಾಡಬೇಕಿದೆ ಎಂದರು.

ಇಂದು ಸ್ವಚ್ಛ ಭಾರತ ವಿಷನ್ ಅಡಿಯಲ್ಲಿ ಹಾಕಿಕೊಂಡ ವಿವಿಧ ಕಾರ್ಯಕ್ರಮಗಳನ್ನು ದೇಶದ ಉದ್ದಗಲಕ್ಕೂ ಮಾಡಲಾಗುತ್ತಿದೆ. ಮೋದಿಯವರ ದೇಶದ ಪ್ರಧಾನ ಮಂತ್ರಿಗಳಾದ ಮೇಲೆ, 10 ಕೋಟಿಗಳಿಗಿಂತಲೂ ಹೆಚ್ಚು ಶೌಚಾಲಯಗಳನ್ನು ನಿರ್ಮಾಣ ಮಾಡಿದ್ದಾರೆ. ಆರೋಗ್ಯ ಮತ್ತು ಸ್ವಚ್ಛತೆಯ ಬಗ್ಗೆ ಗಮನವನ್ನು ನೀಡಿದ್ದಾರೆ. ಮೋದಿಯವರ ಪ್ರಧಾನ ಮಂತ್ರಿಯಾಗಿ ಪ್ರಥಮ ಬಾರಿಗೆ ದೇಶದ ಕೆಂಪು ಕೋಟೆಯ ಮೇಲೆ ನಿಂತು ಭಾಷಣದಲ್ಲಿ ದೇವಾಲಯಕ್ಕಿಂತ ಶೌಚಾಲಯಗಳ ಅವಶ್ಯಕತೆ ಹೆಚ್ಚಾಗಿದೆ ಎಂದಿದ್ದರು ಅದನ್ನು ಅವರು ಮಾಡಿ ತೋರಿಸಿದ ವಿಶ್ವ ನಾಯಕ ಮೋದಿಜಿಯವರಾಗಿದ್ದಾರೆ. ಅವರು ನೂರು ಕಾಲ ಬಾಳಿ ದೇಶದ ಜನರ ಸೇವೆಯನ್ನು ಮಾಡುವಂತ ಆರೋಗ್ಯ ಭಾಗ್ಯವನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸಿದರು.

ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಮಾತನಾಡಿ, ನರೇಂದ್ರ ಮೋದಿಯವರ ಜನ್ಮ ದಿನಾಚರಣೆಯ ಅಂಗವಾಗಿ ಒಂದು ದಿನ ಮಾತ್ರ ಸ್ವಚ್ಛತೆಯನ್ನು ಮಾಡುವುದಲ್ಲ, ಪ್ರತಿ ದಿನ ನಮ್ಮ ಜೀವನ ಹಾಗೂ ಪರಿಸರವನ್ನು ಸ್ವಚ್ಛವಾಗಿಡುವ ಕೆಲಸವನ್ನು ನಾವುಗಳು ಮಾಡಬೇಕಿದೆ ಇದರ ಮೂಲಕ ಇತರರಿಗೆ ಮಾದರಿಯಾಗಬೇಕಿದೆ ಎಂದರು.

ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ, ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ ನಗರಾಧ್ಯಕ್ಷ ನವೀನ್ ಚಾಲುಕ್ಯ ನಗರಸಭಾ ಸದಸ್ಯರಾದ ಶ್ರೀಮತಿರೋಹಿಣಿ, ಮಾಧ್ಯಮ ವಕ್ತಾರರಾದ ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೇ, ಮಲ್ಲಿಕಾರ್ಜನ್, ರಮೇಶ್ ಎಸ್, ಗಾಂಧೀ, ಹೆಗ್ಗನಗೌಡ, ಕೃಷ್ಣಮೂರ್ತಿ ರಮಾದೇವಿ, ಕಲಾವತಿ, ಸುರೇಶ್, ಮುರುಗೇಶ್ ಸೇರಿದಂತೆ ಪಕ್ಷದ ಪ್ರಮುಖರು ಕಾರ್ಯಕರ್ತರು ಸ್ವಚ್ಛತಾ ಅಬಿಯಾನದಲ್ಲಿ ಭಾಗವಹಿಸಿದ್ದರು.



### ಪ್ಯಾಲೆಸ್ತೆನ್ ಬಾವುಟ ಪ್ರದರ್ಶನದ ವಿರುದ್ಧ ಶಿಸ್ತು ಕ್ರಮ ಜರುಗಿಸಿ; ಸಂಸದ ಕಾರಜೋಳ

» ಚಿತ್ರದುರ್ಗ

ಪ್ಯಾಲೆಸ್ತೈನ್ ಬಾವುಟ ಪ್ರದರ್ಶಿಸಿರುವವರ ಮೇಲೆ ಶಿಸ್ತು ಕ್ರಮ ಜರುಗಿಸಬೇಕು ಎಂದು ಸಂಸದ ಗೋವಿಂದ ಕಾರಜೋಳ ಹೇಳಿದ್ದಾರೆ. ಸೋಮವಾರ ಈದ್ ಮಿಲಾದ್ ಮೆರವಣಿಗೆ ವೇಳೆ ಪ್ಯಾಲೆಸ್ತೈನ್ ಬಾವುಟ ಪ್ರದರ್ಶಿಸಿ ಘೋಷಣೆ ಕೂಗಿದ ಪ್ರಕರಣ ಸಂಬಂದ ಪ್ರತಿಕ್ರಿಯೆ ನೀಡಿದ ಸಂಸದ ಗೋವಿಂದ ಕಾರಜೋಳ ಅವರು ದೇಶದಲ್ಲಿ ಇರುವ 140 ಕೋಟಿ ಜನ ದೇಶ ಭಕ್ತರಾಗಿ ಇರಬೇಕೇ ಹೊರತು ದೇಶ ದ್ರೋಹಿಗಳಾಗಿ ಇರಬಾರದು. ಯಾರೇ ತಪ್ಪು ಮಾಡಿದ್ದರು ಯಾವುದೇ ಧರ್ಮದವರು ತಪ್ಪು ಮಾಡಿದ್ದರು ಯಾವುದೇ ಜಾತಿಯವರು ತಪ್ಪು ಮಾಡಿದ್ದರು ಅವರ ಮೇಲೆ ಈ ದೇಶದ ಕಾನೂನಿನ ಪ್ರಾಕಾರ ಶಿಸ್ತು ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯ ಮಾಡುವುದಾಗಿ ಸಂಸದ ಗೋವಿಂದ ಕಾರಜೋಳ ಹೇಳಿದ್ದಾರೆ

# ಮುಂಭಾಗದ ಟಯರ್ ಸಿಡಿದು ಜಮೀನಿಗೆ ನುಗ್ಗಿದ ಕೆಎಸ್‌ಆರ್‌ಟಿಸಿ ಬಸ್: ನಾಲ್ವರಿಗೆ ಗಾಯ

» ಚಳ್ಳಕೆರೆ

ಚಳ್ಳಕೆರೆ ನಗರದಿಂದ ತಿಪ್ಪಾರೆಡ್ಡಿಹಳ್ಳಿ ಗ್ರಾಮಕ್ಕೆ ತೆರಳಿ ವಾಪಾಸಾಗುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನ ಮುಂಭಾಗದ ಟಯರ್ ಸಿಡಿದ ಪರಿಣಾಮವಾಗಿ ಚಾಲಕ ನಿಯಂತ್ರಣ ತಪ್ಪಿದ ಬಸ್ ಪಕ್ಕದ ಜಮೀನಿಗೆ ನುಗ್ಗಿದ್ದು ಬಸ್‌ನಲ್ಲಿದ್ದ ಇಬ್ಬರು ಮಹಿಳಾ ಪ್ರಯಾಣಿಕರು ಹಾಗೂ ಚಾಲಕ, ಕಂಡಕ್ಟರ್ ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಪುಟ ↘ 2



### ಲೋಕ ಬಲೆಗೆ ಕಂದಾಯ ಅಧಿಕಾರಿ

» ಚಿತ್ರದುರ್ಗ

ಜಮೀನು ಪೋಡಿ ಮಾಡಿಕೊಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಹಿರಿಯೂರು ಕಂದಾಯ ಅಧಿಕಾರಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾನೆ. ರೈತನೊಬ್ಬನ ಜಮೀನು ಪೋಡಿ ಮಾಡಿಕೊಡಲು ಕಂದಾಯ ಅಧಿಕಾರಿ ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಪೊಲೀಸರ ಬೆಲೆಗೆ ಬಿದ್ದಿದ್ದು ಕೋಡಿಹಳ್ಳಿ ಗ್ರಾಮದ ಕಂದಾಯ ಲೆಕ್ಕಾಧಿಕಾರಿಯಾಗಿ ಕೆಲಸ ನಿರ್ವಹಿಸುತ್ತಿದ್ದ ನಾಗಪ್ಪ ಲಮಾಣಿ ಅವರು ಹಲಗಲದ್ದಿ ಗ್ರಾಮದ ತಿಪ್ಪೇಸ್ವಾಮಿ ಅವರ ಜಮೀನು ಪೋಡಿ ಮಾಡಿಕೊಡಲು 10 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದು 9 ಸಾವಿರ ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಹಿರಿಯೂರು ತಾಲೂಕು ಕಛೇರಿಯಲ್ಲಿ ಈ ಘಟನೆ ನಡೆದಿದೆ. ಲೋಕಾಯುಕ್ತ ಡಿವೈಎಸ್ಪಿ ಮೃತ್ಯುಂಜಯ, ಎಸ್ಪಿ ವಾಸುದೇವ, ಇನ್ಸಪೆಕ್ಟರ್ ಶಿಲ್ಪ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಿದ್ದು ತನಿಖೆ ಮುಂದುವರೆಸಿದ್ದಾರೆ.

## ಪ್ರಮುಖ ಸುದ್ದಿ

### ವಿಶ್ವಕರ್ಮರ ಆದರ್ಶಗಳು ಎಲ್ಲರಿಗೂ ದಾರಿದೀಪ : ಶಾಸಕ ಟಿ.ರಘುಮೂರ್ತಿ

# ವಿಶ್ವಕರ್ಮರು ನಾಡಿಗೆ ನೀಡಿದ ಶಿಲ್ಪಕಲೆ ಸದಾಜೀವಂತ

» ಚಳ್ಳಕೆರೆ

ತನ್ನದೇಯಾದ ವೈಶಿಷ್ಟಮಯ ಶಿಲ್ಪ ಮತ್ತು ಚಿತ್ರಕಲೆಯ ಮೂಲಕ ವಿಶ್ವಪ್ರಸಿದ್ಧರಾದವರು ವಿಶ್ವಕರ್ಮರು. ಅವರ ಕಲೆಗೆ ಬೆಲೆಕಟ್ಟಲು ಸಾಧ್ಯವಿಲ್ಲ, ಅಂತಹ ದೈತ್ಯಶಕ್ತಿಯ ಕಲೆಯನ್ನು ಉಳಿಸಿಕೊಂಡು ಹೋಗುವಲ್ಲಿ ನಾಡಿನ ವಿಶ್ವಕರ್ಮರು ಯಶಸ್ವಿಯಾಗಿದ್ದಾರೆ. ವಿಶ್ವಕರ್ಮರು ನಮಗೆ ಸದಾ ಆದರ್ಶಪ್ರಾಯರು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಮಂಗಳವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ವಿಶ್ವಕರ್ಮ ಸಮಾಜ ಹಮ್ಮಿಕೊಂಡಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇಂದಿಗೂ ಸಹ ಅವರ ಕಲೆಯಲ್ಲಿ ನಾವು ಅವರನ್ನು ಕಾಣಬಹುದಾಗಿದೆ. ಸರಳ ವ್ಯಕ್ತಿತ್ವದ ಸಮಾಜ ಚಿಂತನೆಯನ್ನು ರೂಡಿಸಿಕೊಂಡಿದ್ದ ವಿಶ್ವಕರ್ಮರು ಎಂದೆಂದಿಗೂ ಜನಮಾನಸದಲ್ಲಿ ಉಳಿಯುತ್ತಾರೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್‌ಪಾಷ, ರಾಜ್ಯ ಸರ್ಕಾರ ನಾಡಿಗೆ ಕೊಡುಗೆ ನೀಡಿ ಮಹಾನ್ ವ್ಯಕ್ತಿಗಳ ಸ್ಮರಣೆಯನ್ನು ಇಂದಿನ ಪೀಳಿಗೆಯೂ ಸಹ ನೆನಪಿಸಿಕೊಳ್ಳುವಂತೆ ಮಾಡುವಲ್ಲಿ ಈ ಕಾರ್ಯಕ್ರಮ ರೂಪಿಸಿದೆ. ವಿಶ್ವಕರ್ಮ ಈ ನಾಡುಕಂಡ ಅಪರೂಪದ ಚಿತ್ರಬ್ರಹ್ಮ ಎಂದರು. ಕುಶಲಕರ್ಮಿಕಗಳ ವಿಭಾಗದ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್ ಮಾತನಾಡಿ, ವಿಶ್ವಕರ್ಮರ ಜಯಂತಿಯನ್ನು ನಾಡ ಜಯಂತಿಯಾಗಿ ರೂಪಿಸುವಲ್ಲಿ ಸರ್ಕಾರ ಪಾತ್ರ ಜವಾಬ್ದಾರಿಯಿಂದ ಕೂಡಿದೆ. ಪ್ರತಿವರ್ಷವೂ ಸಹ ನಾವೆಲ್ಲರೂ ವಿಶ್ವಕರ್ಮರ ಜಯಂತಿ ಆಚರಣೆಯನ್ನು ಆಚರಿಸುವ ಅವಕಾಶ ಮಾಡಿಕೊಡಲಾಗಿದೆ. ವಿಶ್ವಕರ್ಮರ ಅನೇಕ ಕಾರ್ಯಗಳ ಬಗ್ಗೆ ಸರ್ಕಾರ ಪುಸ್ತಕದ ಮೂಲಕ ಪ್ರಚಾರ ಕೈಗೊಳ್ಳುವಂತೆ ಮಾಡಬೇಕೆಂದರು.

ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಇಓ ಶಶಿಧರ, ಅಧ್ಯಕ್ಷ ಚಂದ್ರಶೇಖರಚಾರ್, ಉಪಾಧ್ಯಕ್ಷ ವೈ.ನಾಗರಾಜು, ಯುವ ಘಟಕದ ಅಧ್ಯಕ್ಷ ಸೀತಾರಾಮಚಾರ್, ಸಹ ಕಾರ್ಯದರ್ಶಿ ಭರತ್‌ಕುಮಾರ್, ಖಜಾಂಚಿ ಜೆ.ಪಿ.ಪದ್ಮನಾಭಚಾರ್, ಮಾಜಿ ಅಧ್ಯಕ್ಷ ವೆಂಕಟೇಶ್‌ಚಾರ್, ಬಿಎನ್‌ಜಿ ವೆಂಕಟೇಶ್, ಮಹಿಳಾ ಘಟಕದ ಅಧ್ಯಕ್ಷೆ ಉಮಾದೇವಿ, ಮಹಿಳಾ ಘಟಕದಸ ಮಾಜಿ ಅಧ್ಯಕ್ಷ ಕಮಲಮ್ಮ, ಸರಸ್ವತಿ, ಎಂ.ಸುಮ, ಸುಮಲತ, ರಾಜೇಶ್ವರಿ, ಸಿ.ಇ.ಪ್ರಸನ್ನಕುಮಾರ್, ಜಯವೀರಚಾರಿ, ಶ್ರೀನಿವಾಸ್‌ಚಾರ್, ಡಿ.ಶಿವಕುಮಾರ್, ರಾಜೇಂದ್ರಚಾರ್ ಉಪಸ್ಥಿತರಿದ್ದರು.



## ಫಾಸ್ಟ್ ನ್ಯೂಸ್

### ಕರ್ನಾಟಕ ಜಾನಪದ ಪರಿಷತ್ತ್ ಅಧ್ಯಕ್ಷರಾಗಿ ತುಂಬಿನಕೆರೆ ಬಸವರಾಜ್

» ಹೊಸದುರ್ಗ



ಕರ್ನಾಟಕ ಜಾನಪದ ಪರಿಷತ್ತಿನ ತಾಲ್ಲೂಕು ಅಧ್ಯಕ್ಷರಾಗಿ ಪತ್ರಕರ್ತ ತುಂಬಿನಕೆರೆ ಬಸವರಾಜ್ ಆಯ್ಕೆಯಾಗಿದ್ದು, ಕರ್ನಾಟಕ ಜಾನಪದ ಪರಿಷತ್ತಿನ ಕೇಂದ್ರ ಸಮಿತಿಯ ಮಾರ್ಗದರ್ಶನದ ಮೇರೆಗೆ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಜಾನಪದ ಪರಿಷತ್ತಿನ ಜಿಲ್ಲಾಧ್ಯಕ್ಷ ನಿರಂಜನ ದೇವರಮನೆ ತಿಳಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿ ತುಂಬಿನಕೆರೆ ಬಸವರಾಜ್ ಮಾತನಾಡಿ, ಪುಣ್ಯಭೂಮಿ ಕರ್ನಾಟಕದ ಸಾಂಪ್ರದಾಯಿಕ ಜನಪದ ಕಲೆಗಳನ್ನು ಉಳಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಸೋಬಾನೆ ವೀರಗಾಸೆ, ಡೊಳ್ಳು ಕುಣಿತ, ಇದರಲ್ಲಿ ಪರಿಣಿತರಾದ ಎಷ್ಟೋ ವ್ಯಕ್ತಿಗಳು ಅವಕಾಶ ಸಿಗದೇ ನೇಪಥ್ಯಕ್ಕೆ ಸರಿದಿದ್ದಾರೆ. ಗ್ರಾಮೀಣ ಮಟ್ಟದಲ್ಲಿ ಹುದುಗಿರುವ ಇಂತಹ ಪ್ರತಿಭೆಗಳನ್ನು ಗುರುತಿಸಿ, ಪ್ರಾಮಾಣಿಕವಾಗಿ ಮೇಲೆ ತರುವ ಪ್ರಯತ್ನ ಮಾಡುತ್ತೇನೆ. ಜಾನಪದ ಕರ್ನಾಟಕದ ಪುರಾತನ ಪ್ರಸಿದ್ಧ ಕಲೆಯಾಗಿದ್ದು, ಜಾನಪದರ ಬಾಯಿಯಲ್ಲಿ ಸತ್ಯ-ಸಂದೇಶಗಳು ಅಡಗಿವೆ. ಇಂತಹ ಕರ್ನಾಟಕ ಜಾನಪದ ಪರಿಷತ್ ಖ್ಯಾತ ಕಾದಂಬರಿಕಾರ ಐಎಎಸ್ ಅಧಿಕಾರಿ ಎಚ್.ಎಲ್.ನಾಗೇಗೌಡರಿಂದ ಸ್ಥಾಪಿತವಾಗಿರುವ ಈ ಸಂಸ್ಥೆಯಲ್ಲಿ ಕೆಲಸ ಮಾಡುವ ಅವಕಾಶವನ್ನು ಕಲ್ಪಿಸಿರುವುದು ಹೆಮ್ಮೆ ಎನಿಸಿದೆ. ನನಗೆ ಸಿಕ್ಕಿರುವ ಜವಾಬ್ದಾರಿಯನ್ನುಸಮರ್ಥವಾಗಿನಿಭಾಯಿಸುತ್ತೇನೆ ಎಂದು ಹೇಳಿದರು.

### ಸೆಪ್ಟೆಂಬರ್ 22 ರಿಂದ ನೂತನ ಕೆಎಸ್‌ಆರ್‌ಟಿಸಿ ನಿಲ್ದಾಣದಿಂದ ಬಸ್ ಕಾರ್ಯಾಚರಣೆ

» ದಾವಣಗೆರೆ

ನೂತನ ನವೀಕೃತ ಕೆಎಸ್ ಆರ್ ಟಿಸಿ ಬಸ್ ನಿಲ್ದಾಣದಿಂದ ಸೆಪ್ಟೆಂಬರ್ 22 ರಿಂದ ಬಸ್ ಕಾರ್ಯಾಚರಣೆಗೆ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಚಾಲನೆ ನೀಡುವರು. ಸೆ.22 ರಿಂದ ಪ್ರಸ್ತುತ ಸ್ಮಾರ್ಟ್ ಸಿಟಿ ಲಿಮಿಟೆಡ್ ಮತ್ತು ಕ.ರಾ.ರ.ಸಾ.ನಿಗಮದ ವತಿಯಿಂದ ನಿರ್ಮಿತವಾಗಿರುವ ಪಿ.ಬಿ.ರಸ್ತೆಯ ಮರುನಿರ್ಮಿತ ಬಸ್ ನಿಲ್ದಾಣ ಮತ್ತು ಬೇತೂರು ರಸ್ತೆಯ ನೂತನ ಮಾರ್ಗಗಳ ಬಸ್ ನಿಲ್ದಾಣದಿಂದ ಸಂಸ್ಥೆಯ ವಾಹನಗಳ ಕಾರ್ಯಾಚರಣೆ ಆರಂಭವಾಗಲಿದೆ. ಸೆ.22 ರಿಂದ ಹೈಸ್ಕೂಲ್ ಬಸ್ ನಿಲ್ದಾಣದಿಂದ ಸಂಸ್ಥೆಯ ಎಲ್ಲಾ ವಾಹನಗಳ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗುವುದು ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಸಿದ್ದೇಶ್ವರ್ ಎನ್ ಹೆಬ್ಬಾರ್ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆ

» ದಾವಣಗೆರೆ

ನಗರದಲ್ಲಿ ಇಂದು ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು(ಅಭಿವೃದ್ಧಿ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ದಾವಣಗೆರೆ, ಇವರ ವತಿಯಿಂದ ಜಿಲ್ಲಾ ಹಂತದ ಪ್ರೌಢಶಾಲಾ ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆ ಕಾರ್ಯಕ್ರಮವನ್ನು ರಿಂಗ ರಸ್ತೆಯಲ್ಲಿರುವ ಎಜು ಏಷಿಯಾ, ಎಂ.ಎನ್.ಎಸ್.ಕಾಂಟಿನೆಂಟಲ್ ಶಾಲೆಯಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮವು ಇಂದು ಬೆಳಗ್ಗೆ 10ಗಂಟೆಗೆ ಪ್ರಾರಂಭಗೊಂಡು ಮಕ್ಕಳು ವಿಜ್ಞಾನ ವಸ್ತು ಪ್ರದರ್ಶನಗೊಳಿಸುವರು. ಕಾರ್ಯಕ್ರಮದ ಅಧ್ಯತೆಯನ್ನು ಶ್ರೀಮತಿ ಗೀತಾ ಎಸ್. ವಹಿಸುವರು, ಶ್ರೀ ಲಕ್ಷ☐☐ಣ್ ನಾಯ್ಕ ಎಸ್ ರವರಿಂದ ಪ್ರಾಸ್ತವಿಕ ನುಡಿ. ಮುಖ್ಯ ಅತಿಥಿಗಳಾಗಿ ಶ್ರೀ ಸಂತೋಷ ಕುಮಾರ್ ಎಂ.ಎಸ್. ಕಾರ್ಯದರ್ಶಿಗಳು, ಎಜು ಏಷಿಯಾ ಸಮೂಹ ಶಾಲೆಗಳು ಮತ್ತು ಕಾಲೇಜು, ಶ್ರೀ ಮೊಹಮದ್ ಅಯೂಬ್ ಸೊರಬ್, ಶ್ರೀ ಮಂಜುನಾಥ ಸ್ವಾಮಿ ಎಮ್, ಶ್ರೀಮತಿ ವಿಶಾಲಾಕ್ಷಿ ಹೆಚ್.ಆರ್, ಶ್ರೀಮತಿ ವಾಣಿ ಎನ್.ಎಸ್, ಶ್ರೀಮತಿ ಗಾಯತ್ರಿ ಆಗಮಿಸುವರು. ಕಾರ್ಯಕ್ರಮಕ್ಕೆ ಎಲ್ಲಾರು ಆಗಮಿಸಿ ಯಶಸ್ವಿಗೊಳಿಸಬೇಕೆಂದು ಶಾಲಾ ಪ್ರಾಶುಂಪಾಲರಾದ ಶ್ರೀಮತಿ ವಾಣಿ ಎನ್.ಎಸ್ ತಿಳಿಸಿದ್ದಾರೆ.

### ಸಿದ್ದುಡಾಬಾ ಬಳಿ ಬೈಕ್ ಅಪಘಾತ: ತಲೆಗೆ ಪೆಟ್ಟುಬಿದ್ದು ಸಾವು

» ಚಳ್ಳಕೆರೆ

ನಗರದ ಪಾವಗಡ ರಸ್ತೆಯ ಸಿದ್ದುಡಾಬಾ ಬಳಿ ಮೋಟಾರ್‌ಬೈಕ್‌ನಿಂದ ಕೆಳಗೆ ಬಿದ್ದ ವ್ಯಕ್ತಿಯೊಬ್ಬನ ತಲೆಗೆ ಪೆಟ್ಟುಬಿದ್ದು ಮಡಕಶಿರಾದ ಕೃಷ್ಣಪ್ಪ(50) ಮೃತಪಟ್ಟಿರುತ್ತಾನೆ. ಕೃಷ್ಣಪ್ಪನ ಸಹೋದರ ಈ ಬಗ್ಗೆ ಮಾಹಿತಿ ನೀಡಿ ಚಿತ್ರದುರ್ಗಕ್ಕೆ ದೇವಸ್ಥಾನಕ್ಕೆ ಹೋಗಿ ಬರುವುದಾಗಿ ತಿಳಿಸಿದ್ದು, ಅಲ್ಲಿಂದ ವಾಪಾಸ್ ಬರುವಾಗ ಈ ಅವಘಡ ಸಂಭವಿಸಿದೆ. ಚಳ್ಳಕೆರೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ಧಾರೆ.

ವಿಶ್ವಕರ್ಮ ಜಯಂತಿಯಲ್ಲಿ ಶಿಕ್ಷಕ ರಾಘವೇಂದ್ರಚಾರ್ ಅಭಿಮತ

# ವಿಶ್ವಕರ್ಮರು ಜಗತ್ತು ಸೃಷ್ಟಿಸಿದ ಭಾಗ್ಯಶಾಲಿಗಳು

» ಚಿತ್ರದುರ್ಗ





ವಿಶ್ವಕರ್ಮರು ವಿಶ್ವ, ಜಗತ್ತು, ನಾಡಿಗೆ ಭವ್ಯ ರೂಪ ಕಲ್ಪಿಸಿದ ಭಾಗ್ಯಶಾಲಿಗಳು. ಕಣ್ಣಿಗೆ ಕಾಣುವ ಯಾವುದೇ ಭವ್ಯತೆಯಲ್ಲಿ ವಿಶ್ವಕರ್ಮರ ಪ್ರಯತ್ನವಿದೆ. ಜಗತ್ತಿನ ಸುಂದರತೆಗೆ ಕಾರಣ ವಿಶ್ವಕರ್ಮರು ಎಂದು ಹಿರಿಯೂರು ತಾಲ್ಲೂಕು ಗನ್ನಾಯಕನಹಳ್ಳಿ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ರಾಘವೇಂದ್ರಚಾರ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವಕರ್ಮ ಜಯಂತಿ ಆಚರಣೆ ಸಮಾರಂಭದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ವಿಶ್ವಕರ್ಮ ಅಂದರೆ ಎಲ್ಲವನ್ನೂ ಸಾಧಿಸಿದವನು ಎಂದಾಗಿದೆ. ಜಗತ್ತಿನ ಸೃಷ್ಟಿಕರ್ತನೇ ವಿಶ್ವಕರ್ಮವಾಗಿದ್ದಾನೆ. ಯಾವುದೇ ವಸ್ತು, ವ್ಯಕ್ತಿಯಾಗಲಿ, ಕಾಲಕ್ರಮೇಣ ಬಳಸದೇ ಇದ್ದರೆ ಅದು ನಶಿಸಿ ಹೋಗುತ್ತದೆ. ನಾವು ವಿಶ್ವಕರ್ಮನ ಅಸ್ತಿತ್ವ ಅರ್ಥ ಮಾಡಿಕೊಳ್ಳದಿದ್ದರೆ ವಿಶ್ವಕರ್ಮ ಎಂಬ ಪದ ಕೇವಲ ಜಾತಿಗೆ ಸೀಮಿತವಾಗಲಿದೆ. ವಿಶ್ವಕರ್ಮ ಎಂಬುದು ಒಂದು ಜಾತಿಯಲ್ಲ. ಅದು ಒಂದು ಸೃಷ್ಟಿ. ಬೆಳವಣಿಗೆ. ಈ ಜಗತ್ತು ಸೃಷ್ಟಿ ಮಾಡಿದ ಸೃಷ್ಟಿಕರ್ತನ ಹೆಸರೇ ವಿಶ್ವಕರ್ಮ. ಬ್ರಹ್ಮಾಂಡದ ಸೃಷ್ಟಿಕರ್ತನಾದ ವಿಶ್ವಕರ್ಮನಿಗೆ ನಾವೆಲ್ಲರೂ ನಿತ್ಯವೂ ಹೃತ್ಪೂರ್ವಕ, ಭಕ್ತಿಪೂರ್ವಕ ನಮನ ಸಲ್ಲಿಸುವುದರಿಂದಲೇ ಜಗತ್ತು ಉಳಿದಿದೆ ಎಂದು ಅಭಿಪ್ರಾಯಪಟ್ಟರು.

ಕಲ್ಲನ್ನು ದೇವರ ಮೂರ್ತಿಯಾಗಿ ಕೆತ್ತುವ, ಯಾವುದೇ ಲೋಹವನ್ನು ಒಂದು ಸೌಂದರ್ಯ ವಸ್ತುವನ್ನಾಗಿ ಮಾಡುವ ಕಲೆಯನ್ನು ಸಿದ್ಧಿಸಿಕೊಂಡಿರುವ ಸಮಾಜ ವಿಶ್ವಕರ್ಮ ಸಮಾಜ. ಯಾವುದು ಅಮೂರ್ತ ರೂಪದಲ್ಲಿರುತ್ತದೆಯೋ, ಯಾವುದು ಅದರ ಯಾವುದೇ ರೂಪವನ್ನು ಒಳಗೊಂಡಿರುವುದಿಲ್ಲವೋ ಅಂತಹ ವಸ್ತು ತೆಗೆದುಕೊಂಡು ಅದಕ್ಕೊಂದು ಮೌಲ್ಯ, ಬೆಲೆ ಬರುವಂತಹ ಕೆಲಸವನ್ನು ವಿಶ್ವಕರ್ಮ ಸಮಾಜ ಮಾಡಲಿದೆ. ಇದು ವಿಶ್ವಕರ್ಮರು ಮಾಡುವ ವೃತ್ತಿ ಎಂದು ಹೇಳಿದರು.

ವಿಶ್ವಕರ್ಮನ ಐದು ಮುಖಗಳು ಜಗತ್ತಿನ ಸೃಷ್ಟಿಗೆ ಕಾರಣವಾಗಿರುವ ಪಂಚಭೂತಗಳನ್ನು ನೆನಪಿಸುತ್ತದೆ. ಇದು ಅಗ್ನಿ, ನೀರು, ಆಕಾಶ, ಭೂಮಿ ಮತ್ತು ವಾಯು ಇವು ವಿಶ್ವದ ಬ್ರಹ್ಮಾಂಡದ ಐದು ತತ್ವಗಳನ್ನು ಹೇಳುತ್ತವೆ. ಪಂಚಮುಖಗಳು, ಪಂಚಭೂತಗಳು, ಪಂಚತತ್ವಗಳೇ ನಾವು ಕಾಣುವ ದೇವರು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಪದವಿಯಲ್ಲಿ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ, ಜಿಲ್ಲಾ ವಿಶ್ವಕರ್ಮ ಸಮಾಜದ ಜಿಲ್ಲಾಧ್ಯಕ್ಷ ಕೆ.ಟಿ.ಸುರೇಶಾಚಾರ್ಯ, ಉಪಾಧ್ಯಕ್ಷ ಎಸ್.ಕೃಷ್ಣಾಚಾರ್, ಪ್ರಧಾನಕಾರ್ಯದರ್ಶಿ ಎ.ಗೋವರ್ಧನಾಚಾರ್, ಮುಖಂಡರಾದ ಶಿವಣ್ಣಾಚಾರ್, ಮಲ್ಲಿಕಾರ್ಜುನಾಚಾರ್, ಶಿಲ್ಪಿ ಸುರೇಶಾಚಾರ್, ಷಣ್ಮುಖಚಾರ್, ಪದ್ಮಾಕಾಳಾಚಾರ್, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಶ್ರೀನಿವಾಸ್, ನಗರಸಭೆ ಮಾಜಿ ಸದಸ್ಯ ಶ್ರೀರಾಮ್, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ಸಮಾಜದ ಮುಖಂಡರು ಇದ್ದರು. ಹೊಸದುರ್ಗದ ಸರಸ್ವತಿ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು.

ಸಂಸದರಿಂದ ಮೆರವಣಿಗೆಗೆ ಚಾಲನೆ: ವಿಶ್ವಕರ್ಮ ಜಯಂತಿ ಅಂಗವಾಗಿ ಚಿತ್ರದುರ್ಗ ನಗರದ ಬುರುಜನಹಟ್ಟಿಯ ಕೋಟೆ ಆಂಜನೇಯ ದೇವಸ್ಥಾನದಿಂದ ವಿಶ್ವಕರ್ಮರ ಭಾವಚಿತ್ರ ಮೆರವಣಿಗೆಗೆ ಸಂಸದ ಗೋವಿಂದ ಎಂ ಕಾರಜೋಳ ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಭಾಗವಹಿಸಿದ್ದವು. ಕೋಟೆ ಆಂಜನೇಯ ಸ್ವಾಮಿ ದೇಗುಲದಿಂದ ಆರಂಭವಾದ ಮೆರವಣಿಗೆಯು ನಗರದ ಪ್ರಮುಖ ವೃತ್ತಗಳ ಮೂಲಕ ಸಂಚರಿಸಿ, ತರಾಸು ರಂಗಮಂದಿರ ತಲುಪಿತು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಎಸ್.ಕೆ. ಬಸವರಾಜನ್, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ಸಮಾಜದ ಮುಖಂಡರು ಈ ಸಂದರ್ಭದಲ್ಲಿ ಇದ್ದರು.

# ದಿ ಪಾವಗಡ ಸೌಹಾರ್ದ ಸೊಸೈಟಿಗೆ 15 ಕೋಟಿ ಲಾಭ

» ಚಿತ್ರದುರ್ಗ



ದಿ ಪಾವಗಡ ಸೌಹಾರ್ದ ಮಲ್ಟಿಪರ್ಪಸ್‌ಕೋ-ಆಪರೇಟಿವ್ ಸೊಸೈಟಿ ಲಿಮಿಟೆಡ್‌ನ 2023-24ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆಯನ್ನು ಬೆಂಗಳೂರಿನ ಯಲಹಂಕದ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿತ್ತು. ಸಭೆಯ ಉದ್ಘಾಟನೆಯನ್ನು ಜಿ.ನಂಜನ ಗೌಡ ನೇರವೇರಿಸಿ ಮಾತನಾಡಿ, ದಿ ಪಾವಗಡ ಸೌಹಾರ್ದ ಮಲ್ಟಿಪರ್ಪಸ್‌ಕೋ-ಅಪರೇಟಿವ್ ಸೊಸೈಟಿ ಸಂಸ್ಥೆಯು ಬದ್ಧತೆ, ವಿಧೇಯತೆ, ಪ್ರಾಮಾಣಿಕತೆ, ಪಾರದರ್ಶಕತೆ ಮತ್ತು ಭ್ರಷ್ಟಚಾರ ಮುಕ್ತ ಸಂಸ್ಥೆಯಾಗಿದ್ದು, ಬೆಂಗಳೂರು ,ತುಮಕೂರು, ಚಿತ್ರದುರ್ಗ ,ದಾವಣಗೆರೆ, ಶಿವಮೊಗ್ಗ, ಹಾವೇರಿ, ಮೈಸೂರ್, ಮಂಡ್ಯ ಸೇರಿ 33 ಶಾಖೆಗಳನ್ನು ಹೊಂದಿದ್ದು, 19,000 ಸದಸ್ಯರು ಇದ್ದಾರೆ. ಸಹಕಾರಿಯು 2023-24 ನೇ ಸಾಲಿನಲ್ಲಿ 243 ಕೋಟಿಯಷ್ಟು ಠೇವಣಿ. 181 ಕೋಟಿ ಸಾಲ, 15 ಕೋಟಿ ಲಾಭಗಳಿಸಿದೆ ಎಂದರು.

ಈ ಸಮಾರಂಭದಲ್ಲಿ ಸುವರ್ಣ ನ್ಯೂಸ್ ಚಾನಲ್ ಹಿರಿಯ ಸಂಪಾದಕರಾದ ಅಜಿತ್ ಹನುಮಕ್ಕನವರ್ ಉಪನ್ಯಾಸ ನೀಡಿದರು. ಯಲಹಂಕ ಶಾಸಕರಾದ ಎಸ್.ಆರ್.ವಿಶ್ವನಾಥ್ ಭಾಗವಹಿಸಿದ್ದರು. ಅಧ್ಯಕ್ಷತೆಯನ್ನು ವಿ ಪಾವಗಡ ಸೌಹಾರ್ದ ಮಲ್ಟಿಪರ್ಪಸ್ ಕೋ-ಅಪರೇಟಿವ್ ಸೊಸೈಟಿ ಲಿ.ನ ಸಂಸ್ಥಾಪಕ ಅಧ್ಯಕ್ಷರಾದ ಕೃಷ್ಣಾರೆಡ್ಡಿರವರು ವಹಿಸಿಕೊಂಡಿದ್ದರು. ಸಭೆಯಲ್ಲಿ ಆಡಳಿತ ಮಂಡಳಿ ಭಾಗವಹಿಸಿದ್ದರು.

# ಚಿತ್ರಕಲಾವಿದ ಸಿ.ಕಣ್ಮೇಶ್, ಪಿ.ಆರ್.ತಿಪ್ಪೇಸ್ವಾಮಿಗೆ ರಾಜ್ಯ ಮಟ್ಟದ ಪ್ರಶಸ್ತಿ



» ಚಿತ್ರದುರ್ಗ

ಎಸ್.ಜೆ.ಎಂ.ಚಿತ್ರಕಲಾ ಮಹಾವಿದ್ಯಾಲಯದಲ್ಲಿ ಕಳೆದ ಇಪ್ಪತ್ತು ವರ್ಷಗಳಿಂದಲೂಕೆಲಸಮಾಡುತ್ತಿರುವಚಿತ್ರಕಲಾವಿದಸಿ.ಕಣ್ಮೇಶ್‌ರವರಿಗೆ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಹರ್ತಿಕೋಟೆಯ ಪಿ.ಆರ್. ತಿಪ್ಪೇಸ್ವಾಮಿ ರಾಜ್ಯ ಮಟ್ಟದ ಪ್ರಶಸ್ತಿಯನ್ನು ಸೆ.20 ರಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರದಾನ ಮಾಡುತ್ತಿರುವುದು ಜಿಲ್ಲೆಗೆ ಹೆಮ್ಮೆ ಎಂದು ನಾಗರಾಜ್‌ಬೇದ್ರೆ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಎಸ್.ಜೆ.ಎಂ.ಚಿತ್ರಕಲಾ ಶಾಲೆಯಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸುತ್ತಿರುವ ಸಿ.ಕಣ್ಮೇಶ್‌ರವರು ಬಡುಕಟ್ಟು ಸಮುದಾಯ ಹಾಗೂ ಜಾನಪದಕ್ಕೆ ಸಂಬಂಧಿಸಿದಂತೆ ಹೆಚ್ಚು ಚಿತ್ರಕಲೆಗಳನ್ನು ರಚಿಸಿ ಕಲೆಗಾಗಿಯೇ ಜೀವನವನ್ನು ಮುಡುಪಾಗಿಟ್ಟಿದ್ದಾರೆಂದು ಹೇಳಿದರು.

ಪ್ರಕಾಶ್ ರಾಮನಾಯ್ಕ ಮಾತನಾಡಿ ಪಿ.ಆರ್.ತಿಪ್ಪೇಸ್ವಾಮಿ ಕೇವಲ ಜಾನಪದ ಕಲಾವಿದರಷ್ಟೆ ಅಲ್ಲ. ಲಲಿತಕಲಾ ಅಕಾಡೆಮಿ ಅಧ್ಯಕ್ಷರಾಗಿ ಜಾನಪದ ವಸ್ತುಗಳನ್ನು ಸಂಗ್ರಹಿಸಿ ಮುಂದಿನ ಪೀಳಿಗೆಗೆ ಉಳಿಸಿದ್ದಾರೆ. ಚಿತ್ರಕಲೆಗೆ ಸಂಬಂಧಿಸಿದಂತೆ ಅನೇಕ ಪುಸ್ತಕಗಳನ್ನು ಬರೆದು ಕಾಲೇಜುಗಳಿಗೆ ನೀಡಿದ್ದಾರೆ. ಧರ್ಮಸ್ಥಳದಲ್ಲಿರುವ ಮ್ಯೂಸಿಯಂನಲ್ಲಿ ಪಿ.ಆರ್.ತಿಪ್ಪೇಸ್ವಾಮಿರವರ ಸಂಗ್ರಹಗಳು ಇಂದಿಗೂ ಇವೆ. ಅವಿವಾಹಿತರಾಗಿದ್ದುಕೊಂಡು ಕಲೆಗಾಗಿಯೇ ಜೀವನವನ್ನು ಮುಡುಪಾಗಿಟ್ಟ ಪಿ.ಆರ್.ತಿಪ್ಪೇಸ್ವಾಮಿ ಪ್ರಶಸ್ತಿ ಸಿ.ಕಣ್ಮೇಶ್‌ಗೆ ಸಿಕ್ಕಿರುವುದು ಅವರ ಪರಿಶ್ರಮಕ್ಕೆ ತಕ್ಕ ಫಲ. ಪ್ರಶಸ್ತಿಯು 25 ಸಾವಿರ ರೂ.ನಗದು, ಸ್ಮರಣಿಕೆಯನ್ನೊಳಗೊಂಡಿರುತ್ತದೆ ಎಂದರು.ಜಾನಪದ ಹಾಡುಗಾರ ಹರೀಶ್ ಮಾತನಾಡುತ್ತ ಜನಪದ ಚಿತ್ರಗಳ ಮೂಲಕ ಕಲೆಯನ್ನು ಚಿತ್ರಿಸುವ ಅದ್ಬುತ ಕಲಾವಿದ ಪಿ.ಕಣ್ಮೇಶ್‌ಗೆ ಪಿ.ಆರ್.ತಿಪ್ಪೇಸ್ವಾಮಿ ರಾಜ್ಯ ಮಟ್ಟದ ಪ್ರಶಸ್ತಿ ದೊರಕಿರುವುದು ಇಡಿ ಚಿತ್ರಕಲೆಗೆ ಸಂದ ಗೌರವ ಎಂದು ಬಣ್ಣಿಸಿದರು.ಪ್ರಸನ್ನಕುಮಾರ್ ಮಾತನಾಡಿ ಪಿ.ಆರ್.ತಿಪ್ಪೇಸ್ವಾಮಿ ಜಿಲ್ಲೆಯ ಹೆಮ್ಮೆಯ ಕಲಾವಿದರು. ಅಂತಹವರ ಹೆಸರಿನಲ್ಲಿ ಪಿ.ಕಣ್ಮೇಶ್ ರಾಜ್ಯದ ಮುಖ್ಯಮಂತ್ರಿಯಿಂದ ಪ್ರಶಸ್ತಿ ಸ್ವೀಕರಿಸುವುದು ಅವರ ಕಲೆಗೆ ಸಿಕ್ಕ ಗರಿಮೆ ಎಂದು ಗುಣಗಾನ ಮಾಡಿದರು. ಸೈಯದ್ ಖುದ್ದೂಸ್, ರಮೇಶ, ತಿಮ್ಮಾರೆಡ್ಡಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಜಮೀನಿಗೆ ನುಗ್ಗಿದ ಬಸ್: ನಾಲ್ವರಿಗೆ ಗಾಯ

» ಮೊದಲ ಪುಟದಿಂದ



ಚಳ್ಳಕೆರೆಘಟಕಕ್ಕೆಸೇರಿದಕೆಎಸ್‌ಆರ್‌ಟಿಸಿ ಬಸ್ ಪ್ರತಿನಿತ್ಯ ಚಳ್ಳಕೆರೆ ತಿಪ್ಪಾರೆಡ್ಡಿಹಳ್ಳಿಗೆ ಸುಮಾರು ಎಂಟು ಟ್ರಿಪ್ ಹೋಗಿ ಬರುತ್ತಿತ್ತು. ಮಧ್ಯಾಹ್ನ 3ರ ಸಮಯದಲ್ಲಿ ತಿಪ್ಪಾರೆಡ್ಡಿಹಳ್ಳಿ ಕಡೆಯಿಂದ ಚಳ್ಳಕೆರೆಗೆ ಬರುವ ಸಂದರ್ಭದಲ್ಲಿ ಕಾಮಸಮುದ್ರ ಗ್ರಾಮದ ಬಳಿ ಬಸ್‌ನ ಮುಂಭಾಗದ ಟಯರ್ ಸಿಡಿದ ಪರಿಣಾಮ ಈ ಘಟನೆ ಸಂಭವಿಸಿದೆ. ಬಸ್ ರಸ್ತೆಯಿಂದ ಜಮೀನಿಗೆ ನುಗ್ಗಿದ ಸಂದರ್ಭದಲ್ಲಿ ಸುಮಾರು 30ಕ್ಕೂ ಹೆಚ್ಚು ಪ್ರಯಾಣಿಕರಿದ್ದು ಎಲ್ಲರೂ ಬಸ್‌ನಿಂದ ನಿಧಾನವಾಗಿ ಕೆಳಗೆ ಇಳಿದಿದ್ದು, ಇಬ್ಬರು ಮಹಿಳಾ ಪ್ರಯಾಣಿಕರಾದ ಜಯಮ್ಮ(45), ದುರುಗಮ್ಮ(65) ಇವರಿಗೆ ಸಣ್ಣಪ್ರಮಾಣದ ಪೆಟ್ಟುಬಿದ್ದಿರುತ್ತವೆ. ಚಾಲಕ ಶಿವರಾಜ್(38), ಕಂಡಕ್ಟರ್ ಮಂಜಪ್ಪ(34) ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ಧಾರೆ. ಗಾಯಾಳು ಮಹಿಳಾ ಪ್ರಯಾಣಿಕರನ್ನು ಜಾಜೂರಿನ ಸರ್ಕಾರಿ ಆಸ್ಪತ್ರೆ ಅಂಬುಲೆನ್ಸ್ ಮೂಲಕ ಚಳ್ಳಕೆರೆ ಆಸ್ಪತ್ರೆಗೆ ಕರೆತರಲಾಗಿದ್ದು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಪರಶುರಾಮಪುರ ಪೊಲೀಸರು ಪ್ರಕರಣದ ವಿಚಾರಣೆ ನಡೆಸಿದ್ದಾರೆ.

## ಪ್ರಮುಖ ಸುದ್ದಿ

ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 1 ರ ವರೆಗೆ ಸ್ವಚ್ಛತಾ ಹೀ ಸೇವಾ ಪಾಕ್ಷಿಕ

# ದೇಹದ ಶುದ್ಧೀಕರಣ ದೃಷ್ಟಿ ಪರಿಸರದ ಶುಚಿತ್ವ ಅಗತ್ಯ

» ದಾವಣಗೆರೆ



ನಮ್ಮ ದೇಹವನ್ನು ಹೇಗೆ ಶುದ್ಧೀಕರಣ ಮಾಡಿಕೊಳ್ಳುತ್ತೀವೋ ಹಾಗೆ ನಮ್ಮ ಸುತ್ತಮುತ್ತಲಿನ ಪರಿಸರ,ಮನೆ ಹಾಗೂ ನಮ್ಮೂರ ಸ್ವಚ್ಛತೆ ಕಾಪಾಡಿಕೊಳ್ಳುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಅವರು ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಹಳೆಬಾತಿ ಗ್ರಾಮ ಪಂಚಾಯತಿ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಳೆಬಾತಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಸ್ವಚ್ಛತಾ ಹಿ ಆಂದೋಲನ (ಸ್ವಭಾವ ಸ್ವಚ್ಛತಾ ಸಂಸ್ಕಾರ ಸ್ವಚ್ಛತಾ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಗಾಂಧೀಜಿಯವರ ಆಶಯದಂತೆ ಗ್ರಾಮಗಳ ಸ್ವಚ್ಛತೆ, ಗ್ರಾಮಗಳ ಅಭಿವೃದ್ಧಿ ಇದರ ಮುಖ್ಯ ಉದ್ದೇಶವಾಗಿದೆ. ಇದು ಕೇವಲ ಅಭಿಯಾನಕ್ಕೆ ಸೀಮಿತವಾಗಿರದೆ ಪ್ರತಿ ದಿನ ಸ್ವಚ್ಛತೆ ಕಾಪಾಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು.

ಈ 15 ದಿನಗಳ ಅಭಿಯಾನವನ್ನು ನಮ್ಮ ಜಿಲ್ಲೆಯ ಪ್ರತಿ ಮನೆ ಮತ್ತು ಗ್ರಾಮಗಳಲ್ಲಿ ಸ್ವಚ್ಛತೆ ಮಾಡುವುದರ ಮೂಲಕ ಯಶಸ್ವಿಗೊಳಿಸಲು ಕರೆ ನೀಡಿದರು. ಕಾರ್ಯಕ್ರಮದಲ್ಲಿ ತಾಯಿ ಹೆಸರಿನಲ್ಲಿ ಒಂದು ಗಿಡ ನೆಡುವುದರ ಮೂಲಕ ಜಿಲ್ಲೆಯಲ್ಲಿ 20,000 ಗಿಡಗಳನ್ನು ನೆಡುವ ಗುರಿಗೆ ಚಾಲನೆ ನೀಡಿದರು. ಹಾಗೂ ಸ್ವಚ್ಛತಾ ಸಿಬ್ಬಂದಿಗಳಿಗೆ ಸ್ವಚ್ಛತಾ ಪರಿಕರಕಗಳನ್ನು ವಿತರಿಸಲಾಯಿತು, ಪಿಎಂಎವೈ ವಸತಿ ಫಲಾನುಭಾವಿಗಳಿಗೆ ಕಾರ್ಯದೇಶ ವಿತರಿಸಲಾಯಿತು. ಅಂಗನವಾಡಿ, ಶಾಲೆ, ಸ್ವಚ್ಛ ಸಂಕೀರ್ಣ ಘಟಕ, ದ್ರವ ತ್ಯಾಜ್ಯ ಘಟಕಗಳ ಸ್ಥಳ ಪರಿವೀಕ್ಷಣೆ ಮಾಡಿ ಸರಿಯಾದ ನಿರ್ವಹಣೆ ಜವಾಬ್ದಾರಿಗಳ ಕುರಿತು ಅಧಿಕಾರಿಗಳಿಗೆ ಸೂಚಿಸಿದರು.ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯಕ್ ,ತಾಲೂಕು ಪಂಚಾಯತ್, ಆರೋಗ್ಯ ಇಲಾಖೆ ಸಿಬ್ಬಂದಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು,ಸದಸ್ಯರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಪಂಚಾಯತ್ ಸಿಬ್ಬಂದಿ ಗಳು, ಹಾಗೂ ಇನ್ನಿತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಸೆ. 18 ರಂದು ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಸಭೆ

» ಚಿತ್ರದುರ್ಗ

ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆ ಇದೇ ಸೆಪ್ಟೆಂಬರ್ 18 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕರ್ನಾಟಕ ಉಚ್ಚನ್ಯಾಯಾಲಯ ಹಾಗೂ ಕೆಎಸ್‌ಟಿಎಟಿ ಮರುಪರಿಗಣನೆಗೆ ಸ್ವೀಕೃತವಾದ ವಿಷಯಗಳು ಹಾಗೂ ಖಾಸಗಿ ಕಾರ್ಯಕರ್ತರು ಸಲ್ಲಿಸಿರುವ ರಹದಾರಿ ವರ್ಗಾವಣೆ, ವ್ಯತ್ಯಯ ಹಾಗೂ ಇನ್ನಿತರ ವಿಷಯಗಳನ್ನು ಇತ್ಯರ್ಥಪಡಿಸುವ ಸಲುವಾಗಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಸಭೆ ಆಯೋಜಿಸಲಾಗಿದ್ದು, ಸಭೆಗೆ ಸಂಬಂಧಪಟ್ಟ ಅರ್ಜಿದಾರರಾಗಲಿ ಅಥವಾ ಅಧಿಕೃತ ಪ್ರತಿನಿಧಿಗಳು ಹಾಜರಾಗುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತಿಳಿಸಿದ್ದಾರೆ.

### ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಯ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವರ ಅಧ್ಯಕ್ಷತೆಯ ಸಮಿತಿಯ ರಾಜ್ಯ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡಲಿದೆ. ವಿಕಲಚೇತನರ ಕ್ಷೇತ್ರದಲ್ಲಿ 15 ವರ್ಷ ಮೇಲ್ಪಟ್ಟು ಸೇವೆ ಸಲ್ಲಿಸಿರುವ ಶಿಕ್ಷಕರು, ಸಂಸ್ಥೆಗಳು, ಸಾಧನೆಗೈದ ವಿಕಲಚೇತರು ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು www.dwdsc.kar.nic.in ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು.
ಭರ್ತಿ ಮಾಡಿದ ಅರ್ಜಿಗಳನ್ನು ಸೆ.15 ರ ಒಳಗೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಗೆ ದ್ವಿಪ್ರತಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಬಾಲಭವನದ ಆವರಣದಲ್ಲಿನ ಕಚೇರಿ ಹಾಗೂ ದೂರವಾಣಿ ಸಂಖ್ಯೆ 08194-235284 ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಸದುರ್ಗ: ವೈಭವಯುತವಾಗಿ ಜರುಗಿದ ರಾಜಬೀದಿ ಉತ್ಸವ ಹಾಗೂ ಉದ್ವಾಸನ



» ಹೊಸದುರ್ಗ

ಶ್ರೀ ಗಣೇಶ ಸದನ ಟ್ರಸ್ಟ್ (ರಿ) ಹೊಸದುರ್ಗ ಇವರ ಆಶ್ರಯದಲ್ಲಿ ಪಟ್ಟಣದ ಬಸ್ ನಿಲ್ದಾಣದ ಸಮೀಪವಿರುವ ಶ್ರೀ ಗಣೇಶ ಸದನದಲ್ಲಿ 68 ನೇ ವರ್ಷದ ಶ್ರೀ ಗಣೇಶ ಮಹೊತ್ಸವ ಅಂಗವಾಗಿ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿಯ ರಾಜಬೀದಿ ಉತ್ಸವ ಹಾಗೂ ಉದ್ವಾಸನಾ ಕಾರ್ಯಕ್ರಮ ಅತ್ಯಂತ ವೈಭವಯುತವಾಗಿ ಜರುಗಿತು.

ಗಣೇಶ ವಿಸರ್ಜನೆಗೂ ಮುನ್ನ ಗಣೇಶನಿಗೆ ವಿಶೇಷ ಪೂಜೆ ನೇರವೇರಿಸಲಾಯಿತು. ನಂತರ ಅಲಂಕೃತ ವಾಹನವೊಂದರಲ್ಲಿ ಕೂರಿಸಿ, ಜಯಘೋಷ ಮೊಳಗಿಸಲಾಯಿತು. ಗಣೇಶ ಸದನದಿಂದ ಆರಂಭವಾದ ಮೆರವಣಿಗೆ, ಬನಶಂಕರಿ ದೇವಾಲಯ, ಈಶ್ವರ ದೇವಾಲಯ, ದುರ್ಗಾದೇವಿ ದೇವಾಲಯದ ಮೂಲಕ ವೀರಭದ್ರೇಶ್ವರ ಸ್ವಾಮಿ ದೇವಾಲಯ ತಲುಪಿತು, ಎಲ್ಲಾ ದೇವಾಲಯಗಳಲ್ಲೂ ಗಣೇಶನಿಗೆ ಪೂಜೆ ನಡೆಸಲಾಯಿತು. ನಂತರ ಮದಕರಿ ವೃತ್ತದ ಮಾರ್ಗವಾಗಿ ಸೀತಾರಾಘವ ಬ್ಯಾಂಕ್ ರಸ್ತೆಯ ಮೂಲಕ ಸಂತೆಹೊಂಡ ತಲುಪಿತು. ಸಂಜೆ ಸಕಲ ಧಾರ್ಮಿಕ ವಿಧಿಗಳನ್ನು ವಿಶೇಷ ಪೂಜಾ ಕೈಂಕರ್ಯಗಳು ನಡೆದ ನಂತರ ಜಯಘೋಷಗಳ ನಡುವೆ ಗಣೇಶ ವಿಸರ್ಜನೆ ನಡೆಯಿತು.

9 ದಿನಗಳ ಕಾಲ ಪ್ರತಿಷ್ಠಾಪಿಸಿದ್ದ ಗಣೇಶ ಸದನದಲ್ಲಿ ಧರ್ಮಸ್ಥಳ ಮಂಜುನಾಥಸ್ವಾಮಿ ಹಾಗೂ ಅಣ್ಣಪ್ಪ ಸ್ವಾಮಿಯ ಕಥಾ ವೈಭವದ ದೃಶ್ಯಾವಳಿಗಳ ಪ್ರದರ್ಶನ ನಡೆಯುತ್ತಿತ್ತು. ಅಭಿಷೇಕ, ಹೋಮ, ಹವನಗಳು ನಡೆದವು. ಈ ಸಂಧರ್ಬದಲ್ಲಿ ಟ್ರಸ್ಟ್ ಅಧ್ಯಕ್ಷರಾದ ಹಂಜಿಶಿವಸ್ವಾಮಿ. ಡಿ ಆದಿರಾಜಯ್ಯ. ಎನ್.ಮಂಜುನಾಥ್, ಕುಶ್‌ಕುಮಾರ್ ಸೇರಿದಂತೆ ಟ್ರಸ್ಟಿನ ಕಾರ್ಯಕಾರಿ ಆಡಳಿತ ಮಂಡಳಿ ಹಾಗು ಸರ್ವ ಸದಸ್ಯರು ಉಪಸ್ಥಿತರಿದ್ದರು.

# ಸ್ವಚ್ಛತೇಯೇ ಸೇವೆ ಆಂದೋಲನಕ್ಕೆ ಚಾಲನೆ






» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅವರು ಸ್ವಚ್ಛತೆಯೇ ಸೇವೆ-2024ರ ಪ್ರಯುಕ್ತ ಸಸಿಗೆ ನೀರೆರೆಯುವ ಮೂಲಕ ಸ್ವಚ್ಛತಾ ಹೀ ಸೇವಾ ಆಂದೋಲನಕ್ಕೆ ಚಾಲನೆ ನೀಡಿ, ಸ್ವಚ್ಛತೆ ಬಗ್ಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಗ್ರಾಮೀಣ ಪ್ರದೇಶದ ಜನರಲ್ಲಿ ನೈರ್ಮಲ್ಯ, ಶುಚಿತ್ವ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಈಗಾಗಲೇ ಸೆಪ್ಟೆಂಬರ್ 14 ರಿಂದ ಸ್ವಚ್ಛತಾ ಹಿ ಸೇವಾ ಪಾಕ್ಷಿಕ ಆಚರಣೆ ಪ್ರಾರಂಭವಾಗಿದ್ದು,ಅಕ್ಟೋಬರ್ 02ರವರೆಗೆ ನಡೆಯಲಿದೆ. ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿ ಅಂದೋಲನ ರೀತಿಯಲ್ಲಿ ಸ್ವಚ್ಛತಾ ಅಭಿಯಾನ ನಡೆಸುವಂತೆ ತಿಳಿಸಿದರು. ಸ್ವಚ್ಛ ಭಾರತ ಅಭಿಯಾನದ 10ನೇ ವಾರ್ಷಿಕೋತ್ಸವವನ್ನು ಸ್ವಭಾವ ಸ್ವಚ್ಛತೆ, ಸಂಸ್ಕಾರ ಸ್ವಚ್ಛತೆ ಧ್ಯೇಯವಾಕ್ಯದೊಂದಿಗೆ ಸ್ವಚ್ಛತಾ ಕಿ ಭಾಗಿದಾರ, ಸಂಪೂರ್ಣ ಸ್ವಚ್ಛತಾ ಚಟುವಟಿಕೆಗಳು ಹಾಗೂ ಸಫಾಯಿ ಮಿತ್ರ ಸುರಕ್ಷಾ ಮೂರು ಚಟುವಟಿಕೆಗಳನ್ನು ಕೇಂದ್ರಿಕರಿಸಿ ಈ ಪಾಕ್ಷಿಕ ಆಂದೋಲನವನ್ನು ಆಚರಿಸಲಾಗುತ್ತಿದೆ ಎಂದರು.

ಇದೇ ವೇಳೆ ಜಿಲ್ಲಾ ಪಂಚಾಯಿತಿ ಆವರಣದಲ್ಲಿ "ತಾಯಿ ಹೆಸರಿನಲ್ಲಿ ಒಂದು ವೃಕ್ಷ" ಸಸಿ ನೆಡುವಿಕೆ ಅಭಿಯಾನಕ್ಕೆ ಚಾಲನೆ ನೀಡಿದರು.ಕಾರ್ಯಕ್ರಮದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸನಗೌಡ ಪಾಟೀಲ್, ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ಮಧು, ಸಹಾಯಕ ಯೋಜನಾಧಿಕಾರಿ ಸುಮಾ, ಸಾಮಾಜಿಕ ಅರಣ್ಯ ವಿಭಾಗದ ಅಧಿಕಾರಿಗಳು, ಸ್ವಚ್ಛ ಭಾರತ್ ಮಿಷನ್ ಜಿಲ್ಲಾ ಸಮಾಲೋಚಕರು, ನರೇಗಾ ಜಿಲ್ಲಾ ಸಂಯೋಜಕರು, ಎನ್‌ಆರ್‌ಎಲ್‌ಎಂ ಸಮಾಲೋಚಕರು, ಜಿಲ್ಲಾ ಪಂಚಾಯಿತಿ ಎಲ್ಲಾ ವಿಭಾಗಗಳ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಇದ್ದರು.

# ಸಫಾಯಿ ಕರ್ಮಚಾರಿಗಳಿಗೆ ಆರೋಗ್ಯ ತಪಾಸಣೆ

## ಸ್ವಚ್ಛ ಸ್ವಭಾವ, ಸ್ವಚ್ಛ ಸಂಸ್ಕಾರ ಬೆಳೆಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಿ: ಡಾ.ಬಿ.ವಿ.ಗಿರೀಶ್

» ಚಿತ್ರದುರ್ಗ



ಸ್ವಚ್ಛ ಸ್ವಭಾವ, ಸ್ವಚ್ಛ ಸಂಸ್ಕಾರ ಬೆಳೆಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಇಲ್ಲಿನ ನಗರಸಭೆ ಸಭಾಂಗಣದಲ್ಲಿ ಮಂಗಳವಾರ ಆರೋಗ್ಯ ಇಲಾಖೆ ಸಹಯೋಗದಲ್ಲಿ ಪೌರ ಕಾರ್ಮಿಕರ, ಸಫಾಯಿ ಕರ್ಮಚಾರಿಗಳವರ ಆರೋಗ್ಯ ತಪಾಸಣೆ, ಆರೋಗ್ಯ ಮಾಹಿತಿ ಶಿಕ್ಷಣ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ಹೆಚ್ಚು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವ ವರ್ಗಗಳಲ್ಲಿ ಪೌರ ಕಾರ್ಮಿಕರು ಮೊದಲಿಗರು. ನಗರದ ಸ್ವಚ್ಛತೆ ಕಾಪಾಡಿ ನಾಗರೀಕರಿಗೆ ಸಾಂಕ್ರಾಮಿಕ ರೋಗಗಳು ಹರಡದಂತೆ ಕಾಪಾಡುವ ತಾವುಗಳು ನಿಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಲೇಬೇಕು ಎಂದು ಹೇಳಿದರು. ಕಸ ಕಡ್ಡಿ ಚರಂಡಿ ಸ್ವಚ್ಛತೆ, ಶುದ್ಧ ಕುಡಿಯುವ ನೀರು ಒದಗಿಸುವಲ್ಲಿ, ಗಲೀಜುಗಳನ್ನು ಮುಟ್ಟುವ ಸಂದರ್ಭಗಳಲ್ಲಿ ಕಸ ವಿಲೇವಾರಿ ಮಾಡುವಾಗ ಇಲಾಖೆ ಒದಗಿಸಿದ ಗ್ಲೌಸ್, ಬೂಟು, ಮಾಸ್ಕ್ ಇತರೆ ರಕ್ಷಣಾ ಪರಿಕರಗಳನ್ನು ತಪ್ಪದೇ ಉಪಯೋಗಿಸಿ. ಇಲ್ಲವಾದಲ್ಲಿ ಬೇಗನೇ ರೋಗಗಳಿಗೆ ತುತ್ತಾಗುತ್ತಿರಾ ಎಂದು ತಿಳಿಸಿದ ಅವರು, ಸ್ವಚ್ಛ ಸ್ವಭಾವ, ಸ್ವಚ್ಛ ಸಂಸ್ಕಾರ ಬೆಳೆಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಿ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಮಾತನಾಡಿ, ಎಲ್ಲಾ ಕಾರ್ಮಿಕರು ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಕಾರ್ಡ್ ಮಾಡಿಸಿಕೊಳ್ಳಿ. ರೂ.5 ಲಕ್ಷದವರೆಗೆ ನಿಮ್ಮ ಮತ್ತು ನಿಮ್ಮ ಕುಟುಂಬದ ಆರೋಗ್ಯ ಸಮಸ್ಯೆ ಗಂಭೀರ ಸ್ವರೂಪದ ಕಾಯಿಲೆಗಳಿಗೆ ಉಚಿತ ಉನ್ನತ ಮಟ್ಟದ ಚಿಕಿತ್ಸೆ ಪಡೆದುಕೊಳ್ಳಲು ಸಹಕಾರಿಯಾಗಿದೆ ಎಂದರು.

ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಯೋಜನೆಯಡಿ ನಿಮ್ಮ ಕುಟುಂಬದ 1 ವರ್ಷದಿಂದ 19 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಹುಟ್ಟಿನ ನ್ಯೂನ್ಯತೆ, ಕುಂಠಿತಬೆಳವಣಿಗೆ,ದೀರ್ಘಕಾಲೀನ ಆರೋಗ್ಯ ಸಮಸ್ಯೆಗಳಿಗೆ ಉನ್ನತ ಮಟ್ಟದ ಉಚಿತ ಚಿಕಿತ್ಸೆ ತಪಾಸಣೆಗೆ ಸಹಕಾರಿಯಾಗಿದೆ. ಧೂಮಪಾನ, ಮದ್ಯಪಾನ, ತಂಬಾಕು ಸೇವನೆಯಿಂದ ದೂರವಿರಿ. ಶುದ್ಧವಾದ ನೀರು, ಶುದ್ಧವಾದ ಆಹಾರ ಸೇವನೆ, ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ ಅವರು ಕೈ ತೊಳೆದುಕೊಳ್ಳುವ ವಿಧಾನದ ಪ್ರಾತ್ಯಕ್ಷಿಕೆ ನೀಡಿದರು. ಬಿ.ಜಾನಕಿ ಅವರು ಪೌಷ್ಟಿಕಾಹಾರದ ಬಗ್ಗೆ ತಿಳಿಸಿದರು.

ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ ಮಾತನಾಡಿ, ಪ್ರತಿ ಎರಡು ತಿಂಗಳಿಗೆ ಒಮ್ಮೆಯಾದರೂ ಪೌರ ಕಾರ್ಮಿಕರ ಆರೋಗ್ಯ ತಪಾಸಣೆ ಮಾಡಿ ಎಂದು ಆರೋಗ್ಯ ಇಲಾಖೆಗೆ ತಿಳಿಸಿದರು.

ಆರೋಗ್ಯ ತಪಾಸಣಾ ಶಿಬಿರದಲ್ಲಿ ಡಾ.ಬಿಲಾಲ್,ಡಾ.ವಾಣಿ, ಸಂಚಾರಿ ಆರೋಗ್ಯ ಘಟಕದ ತ್ರಿವೇಣಿ, ಲಕ್ಷ್ಮೀದೇವಿ, ರೆಹಮಾನ್, ಶಂಕರಮೂರ್ತಿ, ನಗರಸಭೆ ವ್ಯವಸ್ಥಾಪಕಿ ಮಂಜುಳಾ, ನಗರಸಭೆ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಾಗರಾಜ್, ಬಾಬುರೆಡ್ಡಿ, ಭಾರತಿ, ರುಕ್ಮಿಣಿ, ಪರಿಸರ ಇಂಜಿನಿಯರ್ ಜಾಫರ್ ಹಾಗೂ 98 ಜನ ಸಫಾಯಿ ಕರ್ಮಚಾರಿಗಳು ಇದ್ದರು.

# ಮೀರಸಾಬಿಹಳ್ಳಿಯಲ್ಲಿ ಅದ್ದೂರಿ ಮಾರಮ್ಮನ ಹಬ್ಬ: ಸಾವಿರಾರು ಮಹಿಳೆಯರಿಂದ ದೇವಿಯ ದರ್ಶನ



» ಚಳ್ಳಕೆರೆ

ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಮಾರಮ್ಮನ ಹಬ್ಬವನ್ನು ಗ್ರಾಮದ ಜನರು ವಿಶೇಷ ಭಕ್ತಿಶ್ರದ್ದೆಯಿಂದ ಆಚರಿಸಿದರು. ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದ ಜನರು ದೇವಿಗೆ ಮಂಗಳಾರತಿ, ಪೂಜೆಯ ನಂತರ ತಮ್ಮ ಹರಿಕೆ ತೀರಿಸಿದರು.

ಈ ಬಗ್ಗೆ ಮಾಹಿತಿ ನೀಡಿದ ಗ್ರಾಮದ ಹಿರಿಯರು, ಪ್ರತಿವರ್ಷವೂ ಮಾರಮ್ಮಹಬ್ಬ ಮುನ್ನ ದಿನ ಗ್ರಾಮದ ರಾಣಿಕೆರೆಯ ಪಕ್ಕದ ಹೊಳೆಗೆ ಗಂಗಾಪೂಜೆ ಪೂರೈಸಿಕೊಂಡು ಪಾವಾಸ್ ಗ್ರಾಮಕ್ಕೆ ಬಂದು ಪೂಜಾರಿ ಕೃಷ್ಣಪ್ಪ, ಮಧುರವರ ಮನೆಯ ಮುಂಭಾಗದಲ್ಲಿ ಮಾರಮ್ಮದೇವಿ ಆಸೀನಳಾಗುತ್ತಾಳೆ. ಭಕ್ತರು ಅಲ್ಲಿಯೇ ಪೂಜೆ ಸಲ್ಲಿಸಿದ ನಂತರ ಗುಡಿಗೆ ಮಾರಮ್ಮನನ್ನು ಮಂಗಳವಾದ್ಯಗಳೊಂದಿಗೆ ಕರೆತರಲಾಗುವುದು. ಈ ಸಂದರ್ಭದಲ್ಲಿ ಗ್ರಾಮದ ಮಹಿಳೆಯರು ಕೈಯಲ್ಲಿ ಆರತಿ ತಟ್ಟೆಹಿಡಿದು ದೇವಿಯನ್ನು ಹಿಂಬಾಲಿಸುವರು. ತಳವಾರರು ಪೂಜೆ ಪ್ರಾರಂಭಿಸಿದ ನಂತರ ಗ್ರಾಮದಲ್ಲಿ ಹಬ್ಬದ ವಾತಾವಣ ನಿರ್ಮಾಣವಾಗುತ್ತದೆ. ಬೇಸಿನ ಸೀರೆ, ಉಡಿಅಕ್ಕಿ, ಬೆಲ್ಲ, ಬೇಳೆ ನೀಡಿ ತಮ್ಮಹರಿಕೆ ತೀರಿಸಿದ ಭಕ್ತರು. ದೇವಾಲಯದ ಬಳಿ ಮಹಿಳೆಯರು ಆರತಿಯೊಂದಿಗೆ ದೇವಸ್ಥಾನಕ್ಕೆ ಮೂರು ಸುತ್ತು ಸುತ್ತಿ ದೇವಿಯ ದರ್ಶನ ಪಡೆದು ಪುನೀತರಾಗುವರು

# ಗಜಾನನ ಸಂಘದ ಗಣಪತಿ ವಿಸರ್ಜನೆ

» ಹೊಳಲ್ಕೆರೆ

ಪಟ್ಟಣದ ಸಂವಿಧಾನ ಸೌಧದಲ್ಲಿ ಗಜಾನನ ಸಂಘ ಪ್ರತಿಷ್ಠಾಪಿಸಿದ್ದ ಗಣೇಶ ಮೂರ್ತಿಯನ್ನು, ಮಂಗಳವಾರ ವಿವಿಧ ಜಾನಪದ ಕಲಾ ತಂಡಗಳ ವಾಧ್ಯಗಳೊಂದಿಗೆ ರಾಜಬೀದಿಗಳಲ್ಲಿ ಅದ್ದೂರಿ ಮೆರವಣಿಗೆ ಕೈಗೊಂಡು ಸಂಜೆ ವಿಸರ್ಜನೆ ಮಾಡಲಾಗಿತ್ತು.

ಕಳೆದ 67 ವರ್ಷಗಳಿಂದ ಗಣಪತಿ ಪ್ರತಿಷ್ಠಾಪಿಸುವ ಸಂಪ್ರಾದಾಯ ಬೆಳೆಸಿಕೊಂಡು ಬಂದಿರುವ ಗಜಾನನ ಸಂಘ ಕಳೆದ ಹತ್ತು ದಿನಗಳ ಕಾಲ ವಿವಿಧ ಜಾನಪದ ಮನರಂಜನಾ ಕಾರ್ಯಕ್ರಮ, ಉಚಿತ ಸಾಮೂಹಿಕ ವಿವಾಹ, ಸಾಧಕರಿಗೆ ಸನ್ಮಾನ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕೈಗೊಳ್ಳಲಾಗಿತ್ತು.

ಮಂಗಳವಾರ ಬೆಳಿಗ್ಗೆ 10 ಗಂಟೆಗೆ ವಿಸರ್ಜನಾ ಮಹಾಪೂಜೆ ಸಲ್ಲಿಸಿದ ಸಂಘದ ಸದಸ್ಯರು ಪಟ್ಟಣದ ಗಣಪತಿ ಸರಕಲ್, ಮೇಲಿನ ಸ್ಟಾಂಡ್, ಕೋಟೆ ರಾಜಬೀದಿಗಳು, ಚಿಕ್ಕಜಾಜೂರು ಕ್ರಾಸ್ ಸೇರಿ ಪಟ್ಟಣದ ರಾಜ ಬೀದಿಗಳಲ್ಲಿ ಮೆರವಣಿಗೆ ಕೈಗೊಳ್ಳಲಾಗಿತ್ತು. ಗಣೇಶ ವಿಸರ್ಜನೆ ಅಂಗವಾಗಿ ನಾಡಿನ ಹೆಸರಾಂತ ಡೊಳ್ಳು, ತಮಟೆವಾಧ್ಯ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳು ಪಾಲ್ಗೊಂಡಿದ್ದವು.

ಗಣಪತಿ ವಿಸರ್ಜನಾ ಮೆರವಣಿಗೆ ನೇತೃತ್ವವನ್ನು ಸಂಘದ ಅಧ್ಯಕ್ಷ ಪಿ.ಆರ್.ಮಲ್ಲಿಕಾರ್ಜುನಸ್ವಾಮಿ ವಹಿಸಿದ್ದು, ಸಂಘದ ಸದಸ್ಯರು, ಪುರಸಭೆಯ ಪ್ರತಿನಿಧಿಗಳು, ವಿವಿಧ ಸಂಘಸಂಸ್ಥೆಗಳ ಸದಸ್ಯರು ಪಾಲ್ಗೊಂಡಿದ್ದರು.



## ಪ್ರಮುಖ ಸುದ್ದಿ

# ದಲಿತರ ಮೇಲೆ ಹಲ್ಲೆ, ಜಾತಿ ನಿಂದನೆಗಳು ಭಯವಿಲ್ಲದೆ ನಡೆಯುತ್ತಿವೆ

» ಚಿತ್ರದುರ್ಗ



ಹಿಂದು ಧರ್ಮದಲ್ಲಿ ದಲಿತರನ್ನು ಸರಿಯಾದ ರೀತಿಯಲ್ಲಿ ನಡೆಸುತ್ತಿಲ್ಲ, ಅವರನ್ನು ಎಲ್ಲೂ ಸಹಾ ಬಿಡುತ್ತಿಲ್ಲ, ದೇವಾಲಯದ ಹೊರಗಡೆ ಇಟ್ಟಿದ್ದಾರೆ, ಸವರ್ಣಿಯರ ಓಣಿಗಳಲ್ಲಿ ಓಡಾಡಲು ಬಿಡುತ್ತಿಲ್ಲ, ಇದು ಹೀಗೇಯೇ ಮುಂದುವರೆದರೆ ಎಲ್ಲಾ ದಲಿತರು ಭೌದ್ಧ ಧರ್ಮವನ್ನು ಅನುಸರಿಸಲಾಗುವುದೆಂದು ದಲಿತ ಮುಖಂಡ ಕರ್ನಾಟಕ ದಲಿತ ಸಂಘರ್ಷ ಸಮಿತಿ ಒಕ್ಕೂಟಗಳದ ಬಾಳೆಕಾಯಿ ಶ್ರೀನಿವಾಸ್ ಎಚ್ಚರಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ರಾಜ್ಯದಲ್ಲಿ ದಲಿತರ ಮೇಲೆ ಹಲ್ಲೆ, ಜಾತಿ ನಿಂದನೆ ಸಾಮಾಜಿಕ ಬಹಿಷ್ಕಾರದಂತಹ ಘಟನೆಗಳು ಭಯವಿಲ್ಲದೆ ನಡೆಯುತ್ತಿದೆ. ಸಾರ್ವಜನಿಕವಾಗಿ ಯಾವುದೇ ಕಾನೂನಿನ ಭಯವಿಲ್ಲದೆ ನಡೆಯುತ್ತಿದೆ. ಕರ್ನಾಟಕದಲ್ಲಿ ಪ್ರತಿಯೊಂದು ಪ್ರತಿಯೊಂದು ಜಿಲ್ಲೆಯಲ್ಲೂ ಪ್ರತಿಯೊಂದು ಗ್ರಾಮದಲ್ಲೂ ಕೂಡ ಅಸ್ಪೃಶ್ಯತೆ ಆಚರಣೆ ಕೊನೆಗೊಂಡಿರುವುದಿಲ್ಲ ಕಾಂಗ್ರೆಸ್ ಸರ್ಕಾರ ಮತ್ತು ಈಗಿನ ಜನಪ್ರಿಯ ಮುಖ್ಯಮಂತ್ರಿ ಕೂಡ ನಾವು ದಲಿತ ಹಾಗೂ ಅಹಿಂದ ಪರ ಎಂದು ಕೂಡ ನಾಟಕೀಯ ಹೇಳಿಕೆಯನ್ನು ಕೊಡುತ್ತಾರೆ. ತಾವೇನಾದರೂ ದಲಿತ ಹಿಂದುಳಿದ ಅಲ್ಪಸಂಖ್ಯಾತರ ಧ್ವನಿಯಾದರೆ ಘಟನೆ ನಡೆದ ತಕ್ಷಣವೇ ಇಂತಹ ಘಟನೆಗಳು ಮರುಕಳಿಸದಂತೆ ಬಿಗಿಯಾದ ಕಾನೂನು ಕ್ರಮ ಕೈಗೊಳ್ಳಲು ಆಗ್ರಹಿಸಲಾಯಿತು.

ಶಾಸಕ ಮುನಿರತ್ನ ಅವರ ಜಾತಿ ನಿಂದನೆ ಕೊಲೆ ಬೆದರಿಕೆ ಹಾಗೂ ಲಂಚಕ್ಕೆ ಬೇಡಿಕೆ ಇವೆಲ್ಲವೂ ನಡೆದರು "ನಾವೆಲ್ಲಾ ಹಿಂದೂ ನಾವೆಲ್ಲಾ ಒಂದು" ಎನ್ನುವ ಬಿ.ಜೆ.ಪಿಯ ರಾಜ್ಯ ಮುಖಂಡರು ತದ್ದಿರುದ್ಧ ಹೇಳಿಕೆ ನೀಡುತ್ತಾ ಶಾಸಕರ ಪರ ಸಮರ್ಥನೆ ಮಾಡಿಕೊಳ್ಳುತ್ತಿದ್ದಾರೆ. ಈ ತಕ್ಷಣವೇ ಬಿ.ಜೆ.ಪಿಯಿಂದ ಆರ್. ಆರ್. ನಗರದ ಶಾಸಕ ಮುನಿರತ್ನರವರನ್ನು ಉಚ್ಚಾಟಿಸಿದ್ದಲ್ಲದೇ ಅವರಿಂದ ಶಾಸಕ ಸ್ಥಾನಕ್ಕೆ ರಾಜೀನಾಮೆಯನ್ನು ಪಡೆದು ನಂತರ ಬಿ.ಜೆ.ಪಿ ಪಕ್ಷವು ದಲಿತರ ಪರ ಎನ್ನುವ ನಿಲುವು ತೋರಬೇಕು ಎಂದು ಆಗ್ರಹಿಸಿದರು.ಕಾಂಗ್ರೆಸ್‌ನವರು ದಲಿತ ಪರ ಸರ್ಕಾರ ಅಹಿಂದ ಪರ ಮುಖ್ಯಮಂತ್ರಿ ಎಂದು ತೋರ್ಪಡಿಕೆಗೆ ಹೇಳುವುದನ್ನು ನಿಲ್ಲಿಸಬೇಕು ಈ ಸರ್ಕಾರದಲ್ಲಿ ದಲಿತರ ಮೇಲೆ ಜಾತಿ ನಿಂದನೆ, ಹಲ್ಲೆ, ಸಾಮಾಜಿಕ ಬಹಿಷ್ಕಾರ, ಹೆಣ್ಣು ಮಕ್ಕಳ ಸಾಮೂಹಿಕ ಅತ್ಯಾಚಾರ ಹೆಚ್ಚಾಗಿ ಸಾಮಾಜಿಕ ನ್ಯಾಯ ಕನಸಾಗಿದೆ. ಈ ದೇಶ ಕಟ್ಟುವಲ್ಲಿ ದಲಿತ ಅಸ್ಪೃಶ್ಯ ಸಮಾಜದ ಕೊಡುಗೆ ಇದೆ. ಎನ್ನುವುದು ಆಳುವ ವರ್ಗಕ್ಕೆ ತಿಳಿದಿರಬೇಕು ಎಂದು ತಿಳಿಸಿದರು.ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕು, ಉಗಲವಾಟ ಗ್ರಾಮದಲ್ಲಿ ದ್ಯಾಮವ್ವನಗುಡಿಗೆ ಹೋಗಿದ್ದಕ್ಕೆ ಅರ್ಜುನ ಮಾದರ ಎಂಬ ಯುವಕನನ್ನು ಕಂಬಕ್ಕೆ ಕಟ್ಟಿ ಥಳಿಸಲಾಗಿದೆ. ದ್ಯಾಮವ್ವನಗುಡಿಯ ಗರ್ಭ ಗುಡಿಯೊಳಕ್ಕೆ ಏಕೆ ಹೋಗಿದ್ದೆ ಎಂದು ಪ್ರಶ್ನಿಸಿ ಕೇರಿ ಜನರು ನಮ್ಮ ಏರಿಯಾಕ್ಕೆ ಬರಬೇಡಿ, ನೀವು ನಿಮ್ಮ ಏರಿಯಾದಲ್ಲಿರಿ, ನಾವು ನಮ್ಮ ಏರಿಯಾದಲ್ಲಿರುತ್ತೇವೆ ಎಂದು ಡಂಗೂರ ಸಾರಿಸಿದ್ದಾರೆ. ಇದುವರೆಗೂ ಆ ಗ್ರಾಮದಲ್ಲಿ ಕೆಲ ಪುಂಡರನ್ನು ಬಂಧಿಸಿರುವುದಷ್ಟೆ . ಹೊರತು ಗ್ರಾಮದ ಅಸ್ಪೃಶ್ಯತೆ ಬಹಿಷ್ಕಾರವನ್ನು ಇದುವರೆಗೂ ಸರ್ಕಾರ ಯಾವುದೇ ರೀತಿಯ ಕ್ರಮವನ್ನು ತೆಗೆದುಕೊಂಡಿರುವುದಿಲ್ಲ.

ಮುಖ್ಯಮಂತ್ರಿ ಸಿದ್ದರಾಮ ಯ್ಯನವರ ಸರ್ಕಾರ ಬಂದು 18. ತಿಂಗಳಾದರೂ ಕೂಡ ಸಾಮಾಜಿಕ ನ್ಯಾಯ ನೀವು ಕೊಡುತ್ತಿಲ್ಲ. ಇದೇ ರೀತಿ ಮುಂದುವರೆದರೆ ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ ರಾಜಕಾರಣಕ್ಕೆ ತಕ್ಕಪಾಠ ಕಲಿಸುವುದಾಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಒಕ್ಕೂಟ ಆಗ್ರಹಿಸುತ್ತದೆ. ಗೋಷ್ಠಿಯಲ್ಲಿ ಎಸ್.ಎಸ್.ರಾಜ್ಯಧ್ಯಕ್ಷ ಕುಂಚಿಗನಹಾಳ್ ಮಹಲಿಂಗಪ್ಪ, ಡಿ.ಎಸ್.ಎಸ್ ಮುಖಂಡರಾದ ಕೆ.ರಾಜಣ್ಣ ಕಸ್ತೂರಪ್ಪ, ಚಿಕ್ಕಗೊಂಡ ನಹಳ್ಳಿ ಮಲ್ಲಿಕಾರ್ಜುನ ಸಾಮಾಜಿಕ ಹೋರಾಟಗಾರ ಎಂ.ಆರ್.ಶಿವರಾಜ್, ಎಂ.ಆರ್.ಹೆಚ್.ಎಸ್. ಮುಖಂಡರಾದ ಏಕಾಂತಪ್ಪ, ನಿವೃತ್ತ ಉಪನ್ಯಾಸಕರಾದ ನಾಗರಾಜ್, ಮಂಜುನಾಥ ಭಾಗವಹಿಸಿದ್ದರು.

# ನಾವು ಯಾರು? ನಮ್ಮ ಯೋಗ್ಯತೆ ಏನು ?




ಅನ್ನಭಾಗ್ಯದ ಹಸಿದ ಹೊಟ್ಟೆಯವರ ಅಕ್ಕಿ ಕದಿಯುವ ಕಳ್ಳರು ನಾವು ಕಳ್ಳರು....

ಕೊರೋನಾ ಕಷ್ಟದ ಸಮಯದಲ್ಲಿ ವೆಂಟಿಲೇಟರ್ ಖರೀದಿಯಲ್ಲಿ ದುಡ್ಡು ಹೊಡೆಯುವ ನೀಚರು ನಾವು ನೀಚರು.....

ಬುದ್ಧಿಮಾಂದ್ಯ ಬೀದಿ ಹೆಣ್ಣಿನ ಅತ್ಯಾಚಾರ ಮಾಡುವ ಕೀಚಕರು ನಾವು ಕೀಚಕರು......

ವೃದ್ಧಾಪ್ಯದ ಪಿಂಚಣಿಯಲ್ಲಿ ಕಮೀಷನ್ ಹೊಡೆಯುವ ಕಿರಾತಕರು ನಾವು ಕಿರಾತಕರು......

ಡೆತ್ ಸರ್ಟಿಫಿಕೇಟ್ ನೀಡಲೂ ಲಂಚ ಪಡೆಯುವ ಭ್ರಷ್ಟರು ನಾವು ಭ್ರಷ್ಟರು......

ಗಂಡ ಹೆಂಡತಿಯ ಸ್ವಾರ್ಥಕ್ಕಾಗಿ ಹೆತ್ತವರನ್ನು ವೃದ್ಧಾಶ್ರಮಕ್ಕೆ ಸೇರಿಸುವ ಕೊಳಕರು ನಾವು ಕೊಳಕರು......

ಹಣಕ್ಕಾಗಿ ಮನುಷ್ಯನ ಕಿಡ್ನಿಯನ್ನೇ ಕದಿಯುವ ಕಟುಕರು ನಾವು ಕಟುಕರು......

ಮೂರು ವರ್ಷದ ಹಸುಳೆಯ ಮೇಲೆ ಲೈಂಗಿಕ ದೌರ್ಜನ್ಯ ಮಾಡುವ ರಾಕ್ಷಸರು ನಾವು ರಾಕ್ಷಸರು......

ವೇಶ್ಯೆಯರ ಬಳಿಯೂ ಹಣ ಕೀಳುವ ತಲೆಹಿಡುಕರು ನಾವು ತಲೆಹಿಡುಕರು......

ಎಳೆಯ ಮಕ್ಕಳನ್ನು ದುಡಿಸಿಕೊಳ್ಳುವ ದುಷ್ಟರು ನಾವು ದುಷ್ಟರು.......

ಬೆಕ್ಕಿನ ಚಲನೆಯನ್ನು ಹುಲಿ ಎಂದು ಬ್ರೇಕಿಂಗ್ ನ್ಯೂಸ್ ಮಾಡುವ ಪ್ರಚಂಡರು ನಾವು ಪ್ರಚಂಡರು..... ರಸ್ತೆಯಲ್ಲಿ ಮಕ್ಕಳನ್ನು ಕೊಚ್ಚಿಕೊಂದ ನಾಯಿಗಳಿದ್ದರೂ ಸಮಸ್ಯೆ ಪರಿಹರಿಸದ ಮತಿಹೀನರು ನಾವು ಮತಿಹೀನರು...... ತಿನ್ನುವ ಆಹಾರ ಕಲಬೆರಕೆ ಮಾಡುವ ಮುಠ್ಠಾಳರು ನಾವು ಮುಠ್ಠಾಳರು....... ಕೃಷಿಭೂಮಿಯನ್ನು 30×40 ಸೈಟ್ ಮಾಡಿ ಮಾರಿಕೊಂಡು ಹಣ ಉಡಾಯಿಸಿದ ಪಾಪಿಗಳು ನಾವು ಪಾಪಿಗಳು.......



ಸಂಸಾರದ ಸಹಜ ಗಲಾಟೆಯನ್ನು ಸುದ್ದಿಮಾಡಿ ಕಾಸು ಮಾಡುವ ದಗಾಕೋರರು ನಾವು ದಗಾಕೋರರು.......

ಆತ್ಮಹತ್ಯೆಯಿಂದ ಸತ್ತ ರೈತನ ಹೆಣದ ಮುಂದೆ ರಾಜಕೀಯ ಮಾಡುವ ವಿಕೃತರು ನಾವು ವಿಕೃತರು......

ಕಾಡನ್ನು ಕಡಿದು ಶೋಕಿಗಾಗಿ ರೆಸಾರ್ಟ ನಿರ್ಮಿಸುವ ಖದೀಮರು ನಾವು ಖದೀಮರು.......

ಹುಲಿ ಚರ್ಮದ ಮೇಲೆ ಕುಳಿತು ವೇದ ಮಂತ್ರ ಪಠಿಸುವ ಅನಾಗರಿಕರು ನಾವು ಅನಾಗರಿಕರು....

ಕೈ ತೋರಿಸಿ ಭವಿಷ್ಯ ಕೇಳುವ ಶತಮೂರ್ಖರು ನಾವು ಶತಮೂರ್ಖರಿ.....

ದೇವರ ವಿಗ್ರಹವನ್ನು ಮುಟ್ಟಲೂ ಮೈಲಿಗೆ ಎನ್ನುವ ಮೂಡರು ನಾವು ಮೂಡರು.......

ಆಸ್ಪತ್ರೆಗಿಂತ ಮಸೀದಿ ಮಂದಿರ ಚರ್ಚುಗಳನ್ನೇ ಭವ್ಯವಾಗಿ ನಿರ್ಮಿಸಿ ಅನಾರೋಗ್ಯವಾದಾಗ ಕೊಳಕು ಆಸ್ಪತ್ರೆಗೆ ಧಾವಿಸುವ ಆತ್ಮವಂಚಕರು ನಾವು ಆತ್ಮವಂಚಕರು.......

ಗ್ರಂಥಾಲಯಗಳನ್ನು ಪಾಳು ಮಂಟಪಗಳಾಗಿಸಿ ಬಾರುಗಳನ್ನು ಲವಲವಿಕೆಯಿಂದ ಇರುವಂತೆ ನೋಡಿಕೊಂಡಿರುವ ಬುದ್ದಿವಂತರು ನಾವು ಬುದ್ದಿವಂತರು......

ಸಿಗರೇಟು ಕ್ಯಾನ್ಸರ್ ಗೆ ಕಾರಣ ಎಂದು ಪಾಕೆಟ್ ಮೇಲೆ ಬರೆದುಕೊಡು ಅಂಗಡಿಗಳಲ್ಲಿ ಮಾರುವ ದನದಾಹಿಗಳು ನಾವು ದನದಾಹಿಗಳು.....

ಅಭಿವ್ಯಕ್ತಿ ಸ್ವಾತಂತ್ರ್ಯ ಇದೆ ಎನ್ನುತ್ತಾ ಸತ್ಯ ಹೇಳುವವನ್ನು ಹಿಂಸಿಸುವ ಮನೋ ವಿಕೃತರು ನಾವು ಮನೋ ವಿಕೃತರು.......

ವಾಸ್ತವ ಜಗತ್ತಿಗಿಂತ ಭ್ರಮಾ ಲೋಕವೇ ಅಪ್ಯಾಯಮಾನ ಎಂದು ಅರ್ಥಮಾಡಿಕೊಂಡ ಮೂರ್ಖರು ನಾವು ಮೂರ್ಖರು.....

ಅಸಮಾನತೆ, ಮೌಢ್ಯತೆಯನ್ನು ನಮ್ಮ ಸಂಸ್ಕೃತಿ ಎಂದು ಹೆಮ್ಮೆ ಪಡುವ ಮನೋ ವೈಕಲ್ಯದವರು ನಾವು ಮನೋ ವೈಕಲ್ಯದವರು...... ಇದು ಉದಾಹರಣೆಗಳು ಮಾತ್ರ. ಸಹಜತೆ ಇನ್ನೂ ಭಯಂಕರವಾಗಿದೆ.

ಒಂದು ವೇಳೆ ಈ ಸಮಾಜ ಇದಕ್ಕಿಂತ ಉತ್ತಮವಾಗಿದೆ ಎಂಬ ಅಭಿಪ್ರಾಯ ನಿಮ್ಮದಾದರೆ ತುಂಬಾ ಸಂತೋಷ. ಅದನ್ನು ಗೌರವಿಸುತ್ತೇನೆ. ನಿಮ್ಮ ಅದೃಷ್ಟಕ್ಕೆ ಅಭಿನಂದನೆಗಳು. ಈ ಲೇಖನ ನಿಮಗೆ ಅನ್ವಯಿಸುವುದಿಲ್ಲ.

ನಾನು ಕಂಡ ನನ್ನ ಅನುಭವಗಳನ್ನು ಮಾತ್ರ ಇಲ್ಲಿ ಹೇಳಲಾಗಿದೆ. ಒಳ್ಳೆಯವರ ಸುದ್ದಿ ನನಗೆ ಬೇಡ. ಅವರಿಂದ ಸಮಾಜಕ್ಕೆ ಯಾವುದೇ ತೊಂದರೆ ಇಲ್ಲ. ಕೆಟ್ಟವರ ಬಗ್ಗೆ ಮಾತ್ರ ನನ್ನ ಚಿಂತೆ. ಏಕೆಂದರೆ ನಾನು ಸಹ ಕೆಟ್ಟವನು ಮತ್ತು ಕೆಟ್ಟ ಸಮಾಜದಲ್ಲಿ ಜೀವಿಸುತ್ತಿದ್ದೇನೆ..........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ



▪ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# 20 ರಂದು ಬಿಟ್ಸ್ ಹೈಟೆಕ್ ಕಾಲೇಜಿನ ಪದವಿ ಪ್ರದಾನ

» **ಚಿತ್ರದುರ್ಗ**

ಇಲ್ಲಿನ ತೋಟಗಾರಿಕಾ ಕಚೇರಿ ಸಮೀಪವಿರುವ ಬಿಟ್ಸ್ ಹೈಟೆಕ್ ಕಾಲೇಜಿನ ಪದವಿ ಪ್ರದಾನ ಸಮಾರಂಭ ಸೆ.20 ರಂದು ಬೆಳಿಗ್ಗೆ 11 ಕ್ಕೆ ತ.ರಾ.ಸು. ರಂಗಮಂದಿರದಲ್ಲಿ ನಡೆಯಲಿದೆ ಎಂದು ಕಾಲೇಜಿನ ಸಂಸ್ಥಾಪಕ ಕೆ.ಬಿ.ರವೀಂದ್ರ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಗುಲ್ಬರ್ಗ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ.ಎಸ್.ಆರ್. ನಿರಂಜನ ಸಮಾರಂಭ ಉದ್ಘಾಟಿಸುವರು. ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಕುಂಬಾರ ಅಧ್ಯಕ್ಷತೆ




ವಹಿಸಲಿದ್ದಾರೆ. ಅಪರಾಧಶಾಸ್ತ್ರ ವಿಶ್ರಾಂತ ಪ್ರಾಧ್ಯಾಪಕ ಡಾ.ನಟರಾಜ್, ಸರ್ಕಾರಿ ವಿಜ್ಞಾನ ಕಾಲೇಜು ಸ್ನಾತಕೋತ್ತರ ಗಣಿತ ವಿಭಾಗದ ಸಹ ಪ್ರಾಧ್ಯಾಪಕ ಡಾ.ಗಟ್ಟಿ ಎನ್.ಬಿ. ಬಿಟ್ಸ್ ಹೈಟೆಕ್ ಕಾಲೇಜು ಪ್ರಾಂಶುಪಾಲರಾದ ಶ್ರೀಮತಿ ಕವಿತ ಬಿ.ಎಂ. ಪಾಲ್ಗೊಳ್ಳಲಿದ್ದಾರೆಂದು ತಿಳಿಸಿದರು.2014 ರಲ್ಲಿ ನಮ್ಮ ಕಾಲೇಜು ಆರಂಭಗೊಂಡಿದ್ದು, ಕೊರೋನಾ ಸಂದರ್ಭದಲ್ಲಿ ಕೆಲವು ವರ್ಷಗಳ ಕಾಲ ಪದವಿ ಪ್ರದಾನ ಸಮಾರಂಭವಾಗಿರಲಿಲ್ಲ. ಹಾಗಾಗಿ ಈ ಬಾರಿಯ ಸಮಾರಂಭದಲ್ಲಿ 75 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಮಾಡಲಾಗುವುದೆಂದರು.

ಶುಲ್ಕ ಕಟ್ಟಲು ಆಗದಂತ ಬಡಮಕ್ಕಳಿಗೆ ಉಚಿತ ಶಿಕ್ಷಣ ನೀಡುತ್ತಿದ್ದೇವೆಲ್ಲದೆ ಕೆಲವರಿಗೆ ಲ್ಯಾಪ್‌ಟ್ಯಾಪ್‌ಗಳನ್ನು ಕೊಟ್ಟಿದ್ದೇವೆ. ಮೂಗ ಮತ್ತು ಕಿವುಡ ವಿದ್ಯಾರ್ಥಿನಿಯೊಬ್ಬಳಿಗೆ ನಮ್ಮ ಕಾಲೇಜಿನಲ್ಲಿ ಶಿಕ್ಷಣ ಕೊಟ್ಟಿದ್ದೇವೆ. ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳೆ ಹೆಚ್ಚು ನಮ್ಮ ಕಾಲೇಜಿನಲ್ಲಿ ಓದುತ್ತಿದ್ದಾರೆ. ಇಲ್ಲಿಯವರೆಗೂ ಮೂರು ಗೋಲ್ಡ್ ಮೆಡಲ್ ಬಂದಿದೆ ಎಂದು ಹರ್ಷ ವ್ಯಕ್ತಪಡಿಸಿದರು.ಅಪರಾಧಶಾಸ್ತ್ರ ವಿಶ್ರಾಂತ ಪ್ರಾಧ್ಯಾಪಕ ಡಾ.ನಟರಾಜ್ ಮಾತನಾಡಿ ಡೊನೇಷನ್ ಹಾವಳಿ ಹೆಚ್ಚಾಗಿರುವ ಇಂದಿನ ಕಾಲದಲ್ಲಿ ಬಿಟ್ಸ್ ಹೈಟೆಕ್ ಕಾಲೇಜು ವಿಭಿನ್ನವಾಗಿದೆ. ವಿಶ್ವವಿದ್ಯಾನಿಲಯಗಳು, ಸರ್ಕಾರಗಳೆ ವಿದ್ಯಾರ್ಥಿಗಳ ಗೋಳನ್ನು ಕೇಳದ ಇಂತಹ ಪರಿಸ್ಥಿತಿಯಲ್ಲಿ ಬಡ ಮಕ್ಕಳಿಗೆ ಉಚಿತ ಶಿಕ್ಷಣ ನೀಡಿ ಉದಾರತೆ ಮೆರೆಯುತ್ತಿರುವುದು ಸುಲಭದ ಮಾತಲ್ಲ ಎಂದು ಹೇಳಿದರು.ಬಿಟ್ಸ್ ಹೈಟೆಕ್ ಕಾಲೇಜಿನ ಪ್ರಾಂಶುಪಾಲರಾದ ಜಿ.ಎಂ. ಕವಿತ ಮಾತನಾಡಿ, ಪ್ರತಿ ವರ್ಷವೂ ನಮ್ಮ ಕಾಲೇಜಿಗೆ ಒಂದು ಇಲ್ಲವೇ ಎರಡು ರ್‍ಯಾಂಕ್‌ಗಳು ಬರುತ್ತಿವೆ. ಹಣಕ್ಕಿಂತ ಮುಖ್ಯವಾಗಿ ಬಡ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಉದ್ದೇಶ ಎಂದರು.

## ಹೊಸದುರ್ಗ: ಆಸ್ಪತ್ರೆಯ ರೋಗಿಗಳಿಗೆ ಹಾಲು ಹಣ್ಣು ವಿತರಣೆ

» **ಹೊಸದುರ್ಗ**

ಮುಸಲ್ಮಾನರ ಪವಿತ್ರ ಹಬ್ಬಗಳಲ್ಲೊಂದಾಗ ಈದ್‌ಮಿಲಾದ್ ಹಬ್ಬದ ಅಂಗವಾಗಿ ಎ.ಐ.ಎಂ.ಐ.ಎಂ ಗ್ರೋಪ್ ವತಿಯಿಂದ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿರುವ ರೋಗಿಗಳಿಗೆ, ವೃದ್ಧಾಶ್ರಮಗಳಿಗೆ ಹಾಗೂ ಪಟ್ಟಣದ ವಿವಿಧ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂಧಿಗಳಿಗೆ ಹಾಲು ಹಣ್ಣು ವಿತರಿಸುವ ಮೂಲಕ ಸಂಬ್ರಮ ಸಡಗರದಿಂದ ಹಬ್ಬವನ್ನ ಆಚರಿಸಲಾಯಿತು. ಹಾಲು ಹಣ್ಣು ವಿತರಿಸಿದ ಎ.ಐ.ಎಂ.ಐ.ಎಂ ಗ್ರೋಪ್‌ನ ಸದಸ್ಯರುಗಳು ಹಿರಿಯರಿಂದ ಆಶೀರ್ವಾದ ಪಡೆದು ಅವರೊಂದಿಗೆ ಕೆಲವು ಗಂಟೆಗಳ ಕಾಲ ಸಂಬ್ರಮಿಸಿದರು.ಈ ಸಂಧರ್ಬದಲ್ಲಿ ಗ್ರೋಪ್‌ನ ಸದಸ್ಯರುಗಳಾದ ಮಹಮ್ಮದ್‌ಇಸ್ಮಾಯಿಲ್ (ಸುಹಾನ) ಅಫ್ರೋಜ್, ಷಾಹಿದ್, ಶಹಿಂಷಾನ್, ಸಾಧಿಕ್, ಅಶ್ರಫ್, ಅಬ್ಬುಸಾನ್, ಓಯಾಜ್, ದಸ್ತಗಿರಿ, ನಧೀಮ್, ಅರ್‌ಫದ್, ಮುಬಾರಕ್, ಸುಹೀಲ್‌ಅಹಮ್ಮದ್ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T